# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 83 | FRIDAY 05-06-2026 | PRGI No : KNKAN/26/A0962 | Pages:4 | Rs.2.00 | M: 9742418836


## ರಾಮಲಿಂಗಾರೆಡ್ಡಿ ರಾಜೀನಾಮೆ



ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದು 24 ಗಂಟೆ ಕಳೆಯುವ ಮೊದಲೇ ಖಾತೆ ಹಂಚಿಕೆ ವಿಚಾರದಲ್ಲಿ ಅಸಮಾಧಾನ ಸ್ಫೋಟಗೊಂಡಿದ್ದು, ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡದಿದ್ದಕ್ಕೆ ಹಿರಿಯ ಸಚಿವ ರಾಮ ಲಿಂಗಾರೆಡ್ಡಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಕಾಂಗ್ರೆಸ್‌ನ ಪ್ರಭಾವಿ ಹಾಗೂ ಹಿರಿಯ ನಾಯಕರಾಗಿರುವ ರಾಮಲಿಂಗಾರೆಡ್ಡಿ ಅವರು ಬೆಂಗಳೂರು ನಗರಾಭಿವೃದ್ಧಿ ಖಾತೆ ಮೇಲೆ ಕಣ್ಣಿಟ್ಟಿದ್ದರು. ಆದರೆ, ಅವರಿಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡದೆ ಜಲಸಂಪನ್ಮೂಲ ಖಾತೆ ಹಂಚಿಕೆ ಮಾಡಿದ್ದು, ಇದು ರಾಮಲಿಂಗಾರೆಡ್ಡಿ ಅವರಿಗೆ ಅಸಮಾಧಾನ ಮೂಡಿಸಿದೆ. ಹಾಗಾಗಿ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ತಮ್ಮ ಸಚಿವ ಸ್ಥಾನದ ರಾಜೀನಾಮೆ ಪತ್ರ ಸಲ್ಲಿಸಿದ್ದಾರೆ.

ಈ ಹಿಂದೆ ಸಿದ್ದರಾಮಯ್ಯ ಸರ್ಕಾರ ರಚನೆ ಸಂದರ್ಭದಲ್ಲಿ ಹೈಕಮಾಂಡ್ ರಾಮಲಿಂಗಾರೆಡ್ಡಿ ಅವರಿಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡಲು ನಿರ್ಧರಿಸಿತ್ತು. ಆದರೆ ಆಗಿನ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಮಲಿಂಗಾರೆಡ್ಡಿ ಅವರ ಮನವೊಲಿಸಿ ಬೆಂಗಳೂರು ನಗರಾಭಿವೃದ್ಧಿ ಖಾತೆಯನ್ನು ನಾನು ಪಡೆಯುತ್ತೇನೆ. ನಾನು ಮುಖ್ಯಮಂತ್ರಿ ಯಾದ ನಂತರ ಬೆಂಗಳೂರು ನಗರಾಭಿವೃದ್ಧಿ ಖಾತೆಯನ್ನು ನಿಮಗೆ ಕೊಡುತ್ತೇನೆ ಎಂದು ರಾಮಲಿಂಗಾರೆಡ್ಡಿ ಅವರಿಗೆ ಮಾತು ಕೊಟ್ಟಿದ್ದರು.

ಆದರೆ ಈಗ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡದೆ ಜಲಸಂಪನ್ಮೂಲ ಖಾತೆ ನೀಡಿರುವುದು ಹಿರಿಯ ಸಚಿವರಾದ ರಾಮಲಿಂಗಾರೆಡ್ಡಿ ಅವರಲ್ಲಿ ಬೇಸರ ಮೂಡಿಸಿದೆ. ನನಗೆ ಸಚಿವ ಸ್ಥಾನವೇ ಬೇಡ ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿ ಕೆಲಸ ಮಾಡುತ್ತೇನೆ ಎಂದು ರಾಮಲಿಂಗಾರೆಡ್ಡಿ ಅವರು ಮುಖ್ಯಮಂತ್ರಿ ಶಿವಕುಮಾರ್ ಅವರಿಗೆ ಹೇಳಿ ಸಚಿವ ಸ್ಥಾನಕ್ಕೆ ರಾಜೀನಾಮೆ ಪತ್ರವನ್ನು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಕೊಟ್ಟಿದ್ದಾರೆ ಎಂದು ಹೇಳಲಾಗಿದೆ.

ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದು ಸಚಿವರುಗಳು ಪ್ರಮಾಣ ವಚನ ಸ್ವೀಕರಿಸಿ ಒಂದು ದಿನ ಕಳೆಯುಷ್ಟರಲ್ಲೇ ಅಸಮಾಧಾನಗಳು ಸ್ಫೋಟಿಸಿರುವುದು ನಾನಾ ವ್ಯಾಖ್ಯಾನಗಳಿಗೆ ಕಾರಣವಾಗಿದೆ. ಕೊಟ್ಟ ಮಾತಿನಂತೆ ನನಗೆ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡಿ ಇಲ್ಲದಿದ್ದರೆ ಸಚಿವ ಸ್ಥಾನವೇ ಬೇಡ ಎಂದು ರಾಮಲಿಂಗಾರೆಡ್ಡಿ ಹೇಳಿದ್ದಾರೆ.

## 'ಡಿಕೆಶಿ ಸರ್ಕಾರ ಹೊಸ ಪೋಸ್ಟರ್ ಹೊಂದಿರುವ ಹಳೆಯ ಸಿನಿಮಾದಂತಿದೆ'; ಧರ್ಮಸ್ಥಳದ ಮಾಸ್ಕ್ ಮ್ಯಾನ್ ರೀತಿ: ಆರ್ ಅಶೋಕ್




ಬೆಂಗಳೂರು: ಹಿಂದಿನ ಸಿದ್ದರಾಮಯ್ಯ ಸರ್ಕಾರ ಭ್ರಷ್ಟಾಚಾರ, ಅಸಮರ್ಥ ಸಚಿವರಿಗೆ ಕುಖ್ಯಾತಿ ಹೊಂದಿತ್ತು. ಕರ್ನಾಟಕದಲ್ಲಿ ಸರ್ಕಾರಿ ಉದ್ಯೋಗಿಗಳಿಗೆ ನೀಡಲು ಹಣವಿಲ್ಲ, ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಸರಿಯಾಗಿ ಔಷಧ ಸಿಗುತ್ತಿಲ್ಲ, ಸಿದ್ದರಾಮಯ್ಯ ಸರ್ಕಾರ 3 ಲಕ್ಷ ಕೋಟಿ ಸಾಲ ಮಾಡಿತ್ತು. ಕರ್ನಾಟಕವನ್ನು ಅಭಿವೃದ್ಧಿಪಡಿಸಲು ಹಣವಿಲ್ಲ, ಹೀಗಿರುವಾಗ ಹೊಸದಾಗಿ ಅಧಿಕಾರ ವಹಿಸಿಕೊಂಡಿರುವ ಡಿ ಕೆ ಶಿವಕುಮಾರ್ ಅವರ ಘೋಷಣೆ ಕೇವಲ ಬೋಗಸ್ ಅಷ್ಟೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್ ಅಶೋಕ್ ವ್ಯಂಗ್ಯವಾಡಿದ್ದಾರೆ,

ಕರ್ನಾಟಕದಲ್ಲಿ ಹೊಸ ಡಿ.ಕೆ ಶಿವಕುಮಾರ್ ನೇತೃತ್ವ ಸರ್ಕಾರದಲ್ಲಿ ಬೆಳವಣಿಗೆಯಾಗುವುದಿಲ್ಲ, ಭ್ರಷ್ಟಾಚಾರ ಹೆಚ್ಚಲಿದೆ ಅಷ್ಟೆ, ಅವರು ರಾಹುಲ್ ಗಾಂಧಿಗೆ ಎಟಿಎಂ ಅಷ್ಟೆ ಎಂದರು.

ಎಲ್ಲಾ ಹಳೆಯ ಮುಖಗಳು

ಹೊಸ ಸಚಿವ ಸಂಪುಟದಲ್ಲಿ ಹಳೆಯ ಮುಖಗಳೇ ಕಾಣಿಸುತ್ತಿವೆ. ಜನರು ಹೊಸ ಚೈತನ್ಯ ಮತ್ತು ಹೊಸ ದಿಕ್ಕನ್ನು ನಿರೀಕ್ಷಿಸಿದ್ದರು. ಆದರೆ ಅದೇ ಹಳೆಯ ನಾಯಕರು ಮತ್ತೆ ಸಚಿವ ಸಂಪುಟದಲ್ಲಿ ಸ್ಥಾನ ಪಡೆದಿದ್ದಾರೆ; ಯಾವುದೇ ಹೊಸ ಮುಖಗಳಿಗೆ ಅವಕಾಶ ಸಿಕ್ಕಿಲ್ಲ. ಇದು ಹೊಸ ವೇಷದಲ್ಲಿರುವ ಹಳೆಯ ಸರ್ಕಾರವಾಗಿದೆ. ಧರ್ಮಸ್ಥಳದ 'ಮಾಸ್ಕ್ ಮ್ಯಾನ್' ರೀತಿಯ ಪರಿಸ್ಥಿತಿ ಇದಾಗಿದೆ.

ರಾಜ್ಯದ ಜನರು ಬರಗಾಲದ ಸಂಕಷ್ಟವನ್ನು ಎದುರಿಸುತ್ತಿದ್ದಾರೆ. ಮಳೆಯಿಂದ ಸಾಕಷ್ಟು ಹಾನಿಯಾಗಿದೆ. ಆತ್ಮಹತ್ಯೆಗಳ ಸಂಖ್ಯೆಯಲ್ಲಿ ಕರ್ನಾಟಕ ದೇಶದಲ್ಲೇ ಎರಡನೇ ಸ್ಥಾನದಲ್ಲಿದೆ. ಮೈಕ್ರೋಫೈನಾನ್ಸ್ ಸಂಸ್ಥೆಗಳ ಕಿರುಕುಳಕ್ಕೆ ಸಂಬಂಧಿಸಿದ ಸಾವುಗಳು ವರದಿಯಾಗುತ್ತಿವೆ. ಆಸ್ಪತ್ರೆಗಳ ಗೋಡೆಗಳು ಕುಸಿದು ಜನರು ಮೃತಪಟ್ಟಿದ್ದಾರೆ. ಗುಂಡಿಗಳಿಂದ ಕೂಡಿದ ರಸ್ತೆಗಳು ಇನ್ನೂ ಅಪಘಾತಗಳು ಮತ್ತು ಗಾಯಗಳಿಗೆ ಕಾರಣವಾಗುತ್ತಿವೆ.

ಈ ಸರ್ಕಾರವು ಹೊಸ ಪೋಸ್ಟರ್ ಹೊಂದಿರುವ ಹಳೆಯ ಸಿನಿಮಾದಂತಿದೆ. ಇದರಿಂದ ಯಾವುದೇ ನಿಜವಾದ ಬದಲಾವಣೆಯನ್ನು ನಿರೀಕ್ಷಿಸಲು ಸಾಧ್ಯವಿಲ್ಲ. ಬದಲಾಗಿರುವುದು ಕೇವಲ ಕುರ್ಚಿಯಲ್ಲಿ ಕುಳಿತಿರುವ ವ್ಯಕ್ತಿ ಮಾತ್ರ. ಜನರು ಉತ್ತಮ ಆಡಳಿತವನ್ನು ಬಯಸಿದ್ದರು. ಹೊಸ ಸರ್ಕಾರದ ಬಗ್ಗೆ ಸಾರ್ವಜನಿಕರಲ್ಲಿ ಸಾಕಷ್ಟು ಕುತೂಹಲ ಮತ್ತು ನಿರೀಕ್ಷೆಗಳಿದ್ದವು. ಆದರೆ ಯಾವುದೇ ಹೊಸ ಬದಲಾವಣೆ ಕಾಣುತ್ತಿಲ್ಲ. ಅದೇ ಹಳೆಯ, ಭ್ರಷ್ಟಾಚಾರದ ಆರೋಪಗಳನ್ನು ಎದುರಿಸಿರುವ ಮುಖಗಳು ಮತ್ತೆ ಅಧಿಕಾರದಲ್ಲಿವೆ ಎಂದರು.

ಯುವಕರು ಹಾಗೂ ಪಕ್ಷದ ನಡುವೆ ಸಂಪರ್ಕ ಸಾಧಿಸಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ನೂತನವಾಗಿ ನಿರ್ಮಿಸಲು ಉದ್ದೇಶಿಸಿರುವ ಭಾರತ್ ಜೋಡೋ ಯುವಕ ಸಂಘ ಕಾಂಗ್ರೆಸ್ ನಿರಾಶ್ರಿತರಿಗೆ ಆಶ್ರಯ ಕೇಂದ್ರವಾಗಲಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ವ್ಯಂಗ್ಯವಾಡಿದ್ದಾರೆ.

ಬೆಂಗಳೂರಿನಲ್ಲಿ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತ್ ಜೋಡೋ ಕಾಂಗ್ರೆಸ್? ನಿರಾಶ್ರಿತರಿಗೆ ಆಶ್ರಯ ತಾಣವಾಗುವುದರಲ್ಲಿ ಯಾವುದೇ ಅನುಮಾನವಿಲ್ಲ. ಡಿ.ಕೆ. ಅಣ್ಣ, ಭಾರತ್ ಜೋಡೋ ಬೇಡ ಮೊದಲು ಕರ್ನಾಟಕ ಜೋಡೋ ಮಾಡಿ. ಭಾರತ ಬಹಳ ದೊಡ್ಡದು ಇದೆ ಎಂದರು.

ನಾನು ಯುವಕರನ್ನು ಜೋಡಣೆ ಮಾಡುತ್ತೇನೆ ಎಂದು ಶಿವಕುಮಾರ್ ಹೇಳಿದ್ದಾರೆ. ಹಾಗಾದರೆ ಇಷ್ಟು ದಿನ ಮಾಜಿ ಸಿಎಂ ಸಿದ್ಧರಾಮಯ್ಯ ಯುವಕರನ್ನು ಹಾಳು ಮಾಡಿದ್ದರಾ? ಸಿದ್ದರಾಮಯ್ಯ ಹಾಳು ಮಾಡಿದ್ದರು, ಇದು ಕಾಂಗ್ರೆಸ್? ನಿರುದ್ಯೋಗಿಗಳಿಗೆ ಪಿಂಚಣಿ ಯೋಜನೆ ಎಂದು ಕುಹಕವಾಡಿದರು.

ನೂತನವಾಗಿ ನೇಮಕಾತಿ ಮಾಡುವುದಾಗಿ ಸಿಎಂ ಹೇಳಿದ್ದಾರೆ. ಆದರೆ ನೇಮಕಾತಿಗೆ ಹಣವೇ ಇಲ್ಲ. ಮೂರು ವರ್ಷದಿಂದ ಖೋತಾ ಬಜೆಟ್ ತೆರಿಗೆ ಹಾಕಿ ಜನರ ಜೀವ ಹಿಂಡಿ, ಸಾಯಿಸಿದ್ದಾರೆ. ಇನ್ನು ಎಲ್ಲಿಂದ ನೇಮಕಾತಿ ಮಾಡಿಕೊಳ್ಳುತ್ತೀರಿ? ಎಂದು ಪ್ರಶ್ನಿಸಿದರು.

## ಮೂಗು ಸುರೇಶರ 'ಕ್ಷಮೆಯಿರಲಿ ತಂದೆ' ಜೂನ್ 12 ಕ್ಕೆ ಬಿಡುಗಡೆ



**ಬೆಳಗಾವಿ ವಾರ್ತೆ ಬೆಂಗಳೂರು :** ಶ್ರೀದೇವಿರಮ್ಮ ಮಲ್ಲಿಕಾ ರ್ಜುನ ಸ್ವಾಮಿ ಫಿಲಂಸ್ ಅವರ ಶ್ರೀಮತಿ ಅಹಲ್ಯಾ ಸುರೇಶ ಅರ್ಪಿಸುವ ಸ.ಹರೀಶ್‌ರ ಕಥೆ 'ಡೆತ್ ಸರ್ಟಿಫಿಕೆಟ್' ಆಧಾರಿತ 'ಕ್ಷಮೆಯಿರಲಿ ತಂದೆ' ಇದೆ ಜೂನ್ 12 ಕ್ಕೆ ರಾಜ್ಯಾದ್ಯಂತ ತೆರೆ ಕಾಣಲಿದೆ.

ರಂಗಭೂಮಿ, ಕಿರುತೆರೆ, ಹಿರಿತೆರೆ ಕಲಾವಿದರಾಗಿ ಹಾಸ್ಯ ಕಲಾವಿದರಾಗಿ ಮೂರು ದಶಕಗಳಿಂದ 400ಕ್ಕೂ ಅಧಿಕ ಚಿತ್ರಗಳಲ್ಲಿ ನಟಿಸಿರುವ ಎಂ.ಎನ್.ಸುರೇಶ್ (ಮೂಗು ಸುರೇಶ್) ಈಗ ನಿರ್ಮಾಪಕ, ನಿರ್ದೇಶಕರಾಗಿ 'ಕ್ಷಮೆಯಿರಲಿ ತಂದೆ' ಚಿತ್ರ ನಿರ್ಮಿಸಿದ್ದು, ಈ ಚಿತ್ರದ ಮೋಷನ್ ಪೋಸ್ಟರ್, ಟ್ರೇಲರ್ ಹಾಗೂ ಲಿರಿಕಲ್ ವಿಡಿಯೋ ಬಿಡುಗಡೆ ಸಮಾರಂಭ ಬೆಂಗಳೂರಲ್ಲಿ ಜರುಗಿತು. ಕನ್ನಡ ಚಿತ್ರರಂಗದ ಹೆಸರಾಂತ ನಿರ್ದೇಶಕರಾದ ಟಿ.ಎಸ್ ನಾಗಾಭರಣ, ನಾಗತಿಹಳ್ಳಿ ಚಂದ್ರಶೇಖರ್, ನಿರ್ಮಾಪಕ ಉಮೇಶ್ ಬಣಕಾರ್ ಹಾಗೂ ರಾಮಕೃಷ್ಣ (ಮೇಕಪ್) ಮುಖ್ಯ ಅತಿಥಿಗಳಾಗಿ ಆಗಮಿಸಿ ಬಿಡುಗಡೆ ಮಾಡಿ, ಚಿತ್ರದ ಟ್ರೇಲರ್ ಚೆನ್ನಾಗಿದೆ. ಚಿತ್ರ ಯಶಸ್ವಿಯಾಗಲಿ, ಎಂ ಎನ್ ಸುರೇಶ್ ನಿರ್ಮಾಪಕ ಹಾಗೂ ನಿರ್ದೇಶಕರಾಗಿಯೂ ಗೆಲ್ಲಲಿ ಎಂದು ಶುಭ ಹಾರೈಸಿದರು. ಚಿತ್ರದ ಕುರಿತು ನಿರ್ಮಾಪಕ ಹಾಗೂ ನಿರ್ದೇಶಕ ಎನ್, ಎಂ.ಸುರೇಶ್ ಮಾತನಾಡಿ ನಾನು ಕೆಲವು ಚಿತ್ರಗಳಿಗೂ ಸಹ ನಿರ್ಮಾಪಕನಾಗಿದ್ದೆ. ಪೂರ್ಣ ಪ್ರಮಾಣದ ನಿರ್ಮಾಪಕನಾಗಿರುವುದು ಈ ಚಿತ್ರದಿಂದ. ನಿರ್ದೇಶನ ನಾನು ಮಾಡಬೇಕೆ ಂದುಕೊಂಡಿರಲಿಲ್ಲ, ನನ್ನ ಕಾರ್ಯವೈಖರಿ ಹತ್ತಿರದಿಂದ ಬಲ್ಲ ಸ್ನೇಹಿತರು ನೀವೇ ನಿರ್ದೇಶನ ಮಾಡಿ ಎಂದರು. ಮೊದಲ ನಿರ್ದೇಶನದ ಚಿತ್ರ, ಬೇರೆಯವರು ದುಡ್ಡು ಹಾಕುವುದು ಬೇಡ ಅಂತ ನಾನು ಕೂಡಿಟ್ಟಿದ್ದ ಹಣವನ್ನೇ ಈ ಚಿತ್ರಕ್ಕೆ ಹಾಕಿ ನಿರ್ಮಾಣ ಮಾಡಿದ್ದೇನೆ. ಬೆಂಗಳೂರು, ತುಮಕೂರು ಮೊದಲಾದ ಕಡೆ ಹತ್ತು ದಿನಗಳ ಕಾಲ ಚಿತ್ರೀಕರಣ ಮಾಡಿದ್ದೇವೆ. ಶೀರ್ಷಿಕೆ ತಿಳಿಸುವಂತೆ ಇದೊಂದು ತಂದ-ಮಗನ ಬಾಂಧವ್ಯ ಸಾರುವ ಚಿತ್ರ. ಈ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು.

ತಾರಾಗಣದಲ್ಲಿ ಮೂಗು ಸುರೇಶ್ ಜೊತೆಗೆ ಮಂಜುನಾಥ ಹೆಗ್ಡೆ, ರೇಣುಕಾ ಬಾಲಿ, ಶ್ರೀಮಂತ, ವಿನ್ಯಾ ಶೆಟ್ಟಿ ಮೊದಲಾದವರಿದ್ದಾರೆ. ತಾಂತ್ರಿಕವರ್ಗದಲ್ಲಿ ಛಾಯಾಗ್ರಹಣ ಸೂರ್ಯಕಾಂತ, ಸಂಕಲನ ಮುತ್ತುರಾಜ್, ಸಂಗೀತ ಪುಣ್ಯಶ್ ಕುಮಾರ್, ಪಿಆರ್ ಓ ಸುಧೀಂದ್ರಕುಮಾರ್, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿಯವರಿದ್ದಾರೆ. ಚಿತ್ರವನ್ನು ಶ್ರೀ ದೇವಿರಮ್ಮ ಮಲ್ಲಿಕಾರ್ಜುನಸ್ವಾಮಿ ಫಿಲಂಸ್, ರಾಘವೇಂದ್ರ ಫಿಲಂಸ್,ಕವಿ ಎಂಟರ್‌ಪ್ರೈಸಸ್ ಹಂಚಿಕೆದಾರರಾಗಿದ್ದಾರೆ.

## ಮೂಲ ದರದಲ್ಲಿ ಗೊಬ್ಬರ ನೀಡಲು ಆಗ್ರಹ: ಪ್ರತಿಭಟನೆ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ರೈತರಿಗೆ ಸಕಾಲಿಕವಾಗಿ ಮೂಲ ದರದಲ್ಲಿ ಗೊಬ್ಬರ ನೀಡುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ನಾರಾಯಣಗೌಡ ಬಣದ ಕಾರ್ಯಕರ್ತರು ಭಾನು ಮಾರ್ಕೆಟಿನ ಸೋಮೇಶ್ವರ ಪಾದಗಟ್ಟಿಯ ಬಳಿ ಒಂದು ಗಂಟೆಗೂ ಹೆಚ್ಚು ಕಾಲ ರಸ್ತೆ ತಡೆ ನಡೆಸಿ ಪ್ರತಿಭಟನೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ , ಬಸವರಾಜ್ ಹೊಗೆಸೊಪ್ಪಿನ ತಾಲೂಕ ಘಟಕದ ಅಧ್ಯಕ್ಷರಾದ ಲೋಕೇಶ ಸುತಾರ ಅವರು ಬಿತ್ತನೆಯ ಹಂಗಾಮಿನಲ್ಲಿ ರೈತರಿಗೆ ಗೊಬ್ಬರ ಮಾರಾಟಗಾರರು ಇಲ್ಲ ಎಂದು ಹೇಳಿ ಇಲ್ಲವೇ ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿದ್ದಾರೆ. ಕೃಷಿ ಇಲಾಖೆಯ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಇದರಿಂದಾಗಿ ರೈತರು ಪರಿತಪಿಸುವಂತಾಗಿದೆ.

ಸರ್ಕಾರ ಒಂದು ಕಣ್ಣಿಗೆ ಸುಣ್ಣ ಒಂದು ಕಣ್ಣಿಗೆ ಬೆಣ್ಣೆ ಎಂಬಂತೆ ಹಾವೇರಿ ಜಿಲ್ಲೆಯ ರೈತರು ಗಲಭೆ ಮಾಡಿದರು ಎಂದು ಅಲ್ಲಿ ಸಾಕಷ್ಟು ಗೊಬ್ಬರವನ್ನು ಪೂರೈಸಲಾಗುತ್ತದೆ ಹಾಗಾದರೆ ನಾವು ಕೂಡ ಗಲಭೆ ಮಾಡಬೇಕೆಂದು ಆಕ್ರೋಶದಿಂದ ಅಧಿಕಾರಿಗಳನ್ನು ಪ್ರಶ್ನಿಸಿದರು.

ನಂತರ ಸ್ಥಳಕ್ಕೆ ಆಗಮಿಸಿದ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಕುಮಾರ್ ಕಾಶಪ್ಪನವರ ರೈತ ಸಂಪರ್ಕ ಕೇಂದ್ರದ ಚಂದ್ರಶೇಖರ್ ಗೌಡ ನರಸಮ್ಮನವರ್ ಪ್ರತಿಭಟನಾಕಾರರ ಸಮಸ್ಯೆಯನ್ನು ಆಲಿಸಿ ರೈತರಿಗೆ ಮೂಲ ದರದಲ್ಲಿ ಗೊಬ್ಬರ ನೀಡುವಂತೆ ಅಂಗಡಿಕಾರರಿಗೆ ತಾಕೀತು ಮಾಡಿ ಸ್ಥಳದಲ್ಲಿಯೇ ಗೊಬ್ಬರ ವಿತರಣೆಗೆ ವ್ಯವಸ್ಥೆ ಮಾಡಲಾಯಿತು ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಇನ್ನು ಮುಂದೆ ಅಂಗಡಿಕಾರರು ಸರ್ಕಾರ ನಿಗದಿಪಡಿಸಿದ ದರಗಳ ನಾಮಫಲಕವನ್ನು ಹಾಕಬೇಕು ನಕಲಿ ಬಿಲ್ ನೀಡಿ ರೈತರಿಂದ ಹಣ ವಸೂಲಿ ಮಾಡಿದ ಅಂಗಡೀಕಾರರ ಮೇಲೆ ಕ್ರಮ ಕೈಗೊಳ್ಳಬೇಕು ಏಳು ದಿನಗಳೊಳಗಾಗಿ ಕ್ರಮ ಕೈಗೊಳ್ಳದಿದ್ದರೆ ರಾಜ್ಯ ಹೆದ್ದಾರಿ ಬಂದ್ ಮಾಡಿ ಪ್ರತಿಭಟಿಸುವುದಾಗಿ ಎಚ್ಚರಿಕೆ ನೀಡಿದರು.

ನಂತರ ಸ್ಥಳಕ್ಕೆ ಆಗಮಿಸಿದ ಗ್ರೇಡ್ 2 ತಹಶೀಲ್ದಾರ್ ಮಂಜುನಾಥ ಅಮಾಸಿಯವರಿಗೆ ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪ್ರವೀಣ್ ಗಾಣಿಗೇರ ಬಸವರಾಜ ಮಲ್ಲೂರು ಅರುಣ್ ಮೆಕ್ಕೆ ಗಂಗಾಧರ ಕರಜ ಕಣ್ಣವರ ಗಂಗಾಧರ್ , ಕೊಂಚಿಗೇರಿ ಮಠ ಮಂಜುನಾಥ್ ಕೂಡಳ್ಳಿ ಫಕೀರೇಶ ಅಣ್ಣಿಗೇರಿ ಸಾವಿತ್ರಿ ಅತ್ತಿಗೆರೆ ಹುಲಿಗೆಮ್ಮ ಮೇವುಂಡಿ ಜಯಮ್ಮ ತುಪ್ಪದ ರೇಷ್ಮಾ ಜಾದವ್ ಚನ್ನಬಸಯ್ಯ ಗಡ್ಡದೇವರ ಮಠ ಮುಂತಾದವರು ಇದ್ದರು.

ಪಿಎಸ್‌ಐ ನಾಗರಾಜ್ ಗಡದ ಜಿಕೆ ರಾಠೋಡ್ ಅವರ ನೇತೃತ್ವದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.

## ಡಾ. ಗುರುರಾಜ ಬಿ. ಕಲಕೋಟಿ ಅವರು ಲಿಂಗೈಕ್ಯ; ಭಾವಪೂರ್ಣ ಶ್ರದ್ಧಾಂಜಲಿ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಲಿಂಗರಾಜನಗರ ಹಿತರಕ್ಷಣಾ ಸಮಿತಿಯ ಅಧ್ಯಕ್ಷ, ನಿವೃತ್ ಪ್ರಾಧ್ಯಾಪಕ, ಹಿರಿಯರಾದ ಡಾ. ಜಿ.ಬಿ.ಕಲಕೋಟಿ ಅವರು ಕೆ.ಎಲ್.ಇ ಸಂಸ್ಥೆಯ, ಪಿ.ಸಿ. ಜಾಬಿನ ವಿಜ್ಞಾನ ಮಹಾವಿದ್ಯಾಲ ಯದಲ್ಲಿ ಭೌತಶಾಸ್ತ್ರ ಪ್ರಾಧ್ಯಾಪಕರಾಗಿ ಸುಮಾರು 30 ವರ್ಷಗಳ ಕಾಲ ಭೌತಶಾಸ್ತ್ರ ಭೋಧನೆ ಮಾಡಿ ಸಾವಿರಾರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ, ಎನ್,ಸಿ,ಸಿ ಅಧಿಕಾರಿಯು ಆಗಿದ್ದ, ನಮ್ಮೆಲ್ಲರ ಆತ್ಮೀಯ, ಪ್ರೀತಿಯ, ಶಿಸ್ತು, ಸಮಯ ಪ್ರಜ್ಞೆವುಳ್ಳ, ಕಡಕ್, ನುರಿತ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ, ನಿವೃತ್ತರಾಗಿದ್ದ, ಗೌರವಾನ್ವಿತ ಶಿಕ್ಷಕರು, ಮಾರ್ಗದರ್ಶಕರು, ಹಿತೈಷಿಗಳು, ಸದಾ ಲವಲವಿಕೆ ಯಿಂದ ಇರುತ್ತಿದ್ದ, ಶಿಷ್ಯರ ಏಳ್ಗೆ ಕಂಡು ಹರ್ಷ ವ್ಯಕ್ತಪಡಿಸುತ್ತಿದ್ದ, ವಿರಳ ರಲ್ಲಿ ವಿರಳ, ಅಪರೂಪದ ಶಿಕ್ಷಕರಾದ ಡಾ. ಗುರುರಾಜ ಬಿ. ಕಲಕೋಟಿ ಅವರು ಲಿಂಗೈಕ್ಯರಾಗಿದ್ದಕ್ಕೆ ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥ ಪಾಲಕ, ಹಿರಿಯರಾದ ಡಾ. ಜಿ.ಬಿ.ಕಲಕೋಟಿ ಅವರ ಪ್ರೀತಿಯ, ನಲುಮೆಯ ಶಿಷ್ಯ ಡಾ. ಸುರೇಶ ಡಿ. ಹೊರಕೇರಿ, ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಆ ಮಹಾನ್ ದಿವ್ಯಚೇತನಕ್ಕೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸಿದ್ದಾರೆ ಹಾಗೂ ಕಂಬನಿ ಮಿಡಿದಿದ್ದಾರೆ. ಹಿರಿಯರಾದ ಡಾ. ಜಿ.ಬಿ.ಕಲಕೋಟಿ ಅವರ ಪ್ರೀತಿಯ, ನಲುಮೆಯ ಶಿಷ್ಯರಾದ, ಕೆಎಲ್ಇ ಸಂಸ್ಥೆಯ ಪಿ ಸಿ ಜಾಬಿನ್ ವಿಜ್ಞಾನ ಮಹಾವಿದ್ಯಾಲಯ ದ ನಿವೃತ್ತ ಪ್ರಾಚಾರ್ಯ, ಭೌತಶಾಸ್ತ್ರ ಪ್ರಾಧ್ಯಾಪಕ ಡಾ ಲಿಂಗರಾಜ ಡಿ. ಹೊರಕೇರಿ, ವಿಜಯಪುರದ ಬಿಎಲ್‌ಡಿಇ ಸಂಸ್ಥೆಯ ಕೆ ಸಿ ಪಿ ಮಹಾವಿದ್ಯಾಲಯ ದ ಸಂಖ್ಯಾಶಾಸ್ತ್ರ ಉಪನ್ಯಾಸಕಿ, ಪ್ರೊ ಜಯಶ್ರೀ ಡಿ. ಹೊರಕೇರಿ. ( ಅಳ್ಳಗಿ), ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಆ ಮಹಾನ್ ದಿವ್ಯಚೇತನಕ್ಕೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸಿದ್ದಾರೆ ಹಾಗೂ ಕಂಬನಿ ಮಿಡಿದಿದ್ದಾರೆ. ಹಿರಿಯರಾ ದ ಡಾ. ಜಿ.ಬಿ.ಕಲಕೋಟಿ ಅವರ ಅಗಲಿಕೆಗೆ ಪ್ರಾಚಾರ್ಯ ಡಾ. ಮಹೇಶ ಡಿ. ಹೊರಕೇರಿ, ಬಿ.ಎಫ್.ಕೂಬಿಹಾಳ, ಸಿದ್ದಯ್ಯ ಹಿರೇಮಠ, ಎಚ್.ಎಸ್.ಗಡ್ಡಿ, ಎಸ್.ಐ. ನೇಕಾರ, ಮಾರುತಿ ಎಂ. ತಲಗೇರಿ, ಎಸ್.ಜಿ.ತಿಗಡಿ, ಸಂಜೀವ್ ಹಳ್ಳಿಕೇ ರಿ , ಗಿರೀಶ್ ಕರೀಗೌಡರ , ಶ್ರೀನಿವಾಸ ಗುಡಿ ಸಾಗರ , ಆನಂದ ಹೊಸಭಾವಿ, ಪ್ರಮೋದ ಮುತ್ನಾಳ , ಪ್ರಹ್ಲಾದ್ ಕುಲ ಕರ್ಣಿ , ಶ್ರೀಧರ ಪಾಟೀಲ ಕುಲಕರ್ಣಿ, ಮಹೇಶ್ ಹಿರೇಮಠ , ರಮೇಶ್ ಗಿರಿರಡ್ಡಿ, ವಿಜಯೇಂದ್ರ ತಾಂಬೆ, ಶಂಕರ ಖೋಡೆ, ಪ್ರಭುರಾಜ ಉಮದಿ, ರಮೇಶ್ ಇಂದೂರ, ಗೋಸಾವಿ, ಶೇಖರಗೌಡ , ಎಸ್.ಸಿ. ಪಾಟೀಲ, ಅನಿಲ್ ಧಾರವಾಡಕರ್, ಬಸವಕೇಂದ್ರದ ಕಾರ್ಯಾಧ್ಯಕ್ಷ ಪ್ರೊ ಎಸ್.ವಿ.ಪಟ್ಟಣಶೆಟ್ಟಿ, ಉಪಾಧ್ಯಕ್ಷರಾದ ಬಸವರಾಜ ಎಲ್. ಲಿಂಗಶೆಟ್ಟರ, ಡಾ. ಪ್ರಕಾಶ ಮುನ್ನೋಳಿ, ನಿವೃತ್ ಡಿಡಿಪಿಐ ಆರ್.ಸಿ.ಹಲಗತ್ತಿ, ಸಿದ್ದಲಿಂಗೇಶ ವಾಲಿ, ವೀ ರಣ್ಣ ಗೊವೇಶ್ವರ, ಬಸವರಾಜ ಹೊಸಕೇರಿ, ಡಾ. ಬಿ.ಎಸ್. ಮಾಳವಾಡ, ಎಸ್.ಬಿ. ಪಾಶ್ಚಾಪೂರ, ಡಾ. ಲಿಂಗರಾಜ ರಾಮಾ ಪೂರ, ಎಸ್.ವಿ. ಕೊಟಗಿ, ಡಿ.ಡಿ.ಮಾಳಗಿ ಚನಬಸಪ್ಪ ಧಾರವಾಡಶೆಟ್ಟರ, ವಿರುಪಾಕ್ಷ ಕಟ್ಟಿಮನಿ, ಎಸ್.ಐ.ನೇಕಾರ, ಎಂಟಿ. ರಾಥೋಡ, ಸುಭಾಸ ಚವ್ಹಾಣ, ಡಾ. ವಂದನಾ ಕರಾಳೆ, ಪ್ರೊ ಎಸ್. ಆರ್. ಆಶಿ, ವೀರಣ್ಣ ಹೂಲಿ, ಶಾಂತಪ್ಪ ವಿ. ಹೂಗಾರ, ಡಾ. ಸರ್ವಮಂಗಳಾ ಕುದರಿ, ಬಸವ ರಾಜ ಡಿ. ಅಳ್ಳಗಿ, ಭಾರತಿ ವಾಲಿ, ಪ್ರೊ ಶೋಭಾ ಜಾಬಿನ್, ವಂದನಾ ನೂಲ್ವಿ, ಶ್ರೇಯಾ ಬೆಂಗೇರಿ, ಡಾ. ರಾಮು ಮೂ ಲಗಿ, ಡಾ. ಬಸವಕುಮಾರ ತಲವಾ ಯಿ, ಶಿವಾನಂದ ಬೆಂಗೇರಿ, ಡಾ.ಮಹಾಂತೇಶ ಸಜ್ಜನ, ಮುಂತಾದವರು ಸಂತಾಪ ವ್ಯಕ್ತಪಡಿಸಿದ್ದಾರೆ.

## ಸಹಾಯಧನ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಧಾರವಾಡ:** 2026-27 ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯು ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯ ವಿವಿಧ ಘಟಕಗಳಾದ ಹೊಸ ಪ್ರದೇಶ ವಿಸ್ತರಣೆ (ಡ್ರ್ಯಾಗನ್‌ಫ್ರೂಟ್,ಬಾಳೆ,ಲಿಂಬೆ), ಹೂ ಬೆಳೆ ಪ್ರದೇಶ ವಿಸ್ತರಣೆ, ತರಕಾರಿ ಬೆಳೆಗಳ ಪ್ರದೇಶ ವಿಸ್ತರಣೆ, ಈರುಳ್ಳಿ ಶೇಖರಣಾ ಘಟಕ, ವೈಯಕ್ತಿಕ ಕೃಷಿ ಹೊಂಡ, ತಳ್ಳುಗಾಡಿ, 20 ಹೆಚ್.ಪಿ.ಗಿಂತ ಕಡಿಮೆ ಇರುವ ಟ್ರ್ಯಾಕ್ಟರ್ ಘಟಕಗಳಿಗೆ ಸಹಾಯಧನ ಪಡೆಯಲು ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ರೈತ ರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ರೈತರು ಜೂನ್ 15, 2026ರೊಳಗಾಗಿ ನವಲಗುಂದ ಹಿರಿಯ ಸ ಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಗೆ ಅರ್ಜಿ ಸಲ್ಲಿಸ ಬೇಕೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಧಾರವಾಡ: ಸ್ಪರ್ಧಾತ್ಮಕ ಪರೀಕ್ಷೆಗಾಗಿ ಬಂದಿದ್ದ ಯುವಕ ಹೃದಯಾಘಾತದಿಂದ ಸಾವು



**ಬೆಳಗಾವಿ ವಾರ್ತೆ ಧಾರವಾಡ:** ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಧಾರವಾಡಕ್ಕೆ ಬಂದಿದ್ದ ಯುವಕನೊಬ್ಬ ಹೃದಯಾಘಾತದಿಂದ ಮೃತಪಟ್ಟಿರುವ ದುರ್ಘಟನೆ ನಡೆದಿದೆ. ಯಾದಗಿರಿ ಜಿಲ್ಲೆಯ ಸುರಪುರ ಮೂಲದ 25 ವರ್ಷದ ಮಾರುತಿ ಮೃತ ಯುವಕನಾಗಿದ್ದಾನೆ.

ಮಾರುತಿ ಕಳೆದ ಮೂರು ವರ್ಷಗಳಿಂದ ಧಾರವಾಡದಲ್ಲಿ ವಾಸವಿದ್ದು ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ತರಬೇತಿ ಪಡೆಯುತ್ತಿದ್ದ ಎಂದು ತಿಳಿದುಬಂದಿದೆ. ಉತ್ತಮ ಭವಿಷ್ಯದ ಕನಸು ಹೊತ್ತು ಸ್ವಗ್ರಾಮ ತೊರೆದು ಧಾರವಾಡಕ್ಕೆ ಬಂದಿದ್ದ ಆತ, ನಗರದಲ್ಲಿ ಬಾಡಿಗೆ ಕೊಠಡಿ ಮಾಡಿಕೊಂಡು ವಾಸಿಸುತ್ತಿದ್ದನು.

ಮಂಗಳವಾರ ರಾತ್ರಿ ತನ್ನ ಕೊಠಡಿಯಲ್ಲಿದ್ದ ವೇಳೆ ಮಾರುತಿಗೆ ಏಕಾಏಕಿ ಎದೆ ನೋವು ಕಾಣಿಸಿಕೊಂಡಿದೆ ಎಂದು ಪ್ರಾಥಮಿಕ ಮಾಹಿತಿ ಲಭ್ಯವಾಗಿದೆ. ಕೆಲವೇ ಕ್ಷಣಗಳಲ್ಲಿ ಆತ ಅಸ್ವಸ್ಥಗೊಂಡಿದ್ದು, ಬಳಿಕ ಹೃದಯಾಘಾತಕ್ಕೊಳಗಾಗಿದ್ದಾನೆ ಎನ್ನಲಾಗಿದೆ.

**ಕುಟುಂಬದಲ್ಲಿ ಆಕ್ರಂದನ :** ಘಟನೆ ತಿಳಿಯುತ್ತಿದ್ದಂತೆ ಮಾರುತಿ ಕುಟುಂಬದವರು ಧಾರವಾಡಕ್ಕೆ ಆಗಮಿಸಿದ್ದಾರೆ. ಮಗನ ಅಕಾಲಿಕ ನಿಧನದಿಂದ ಕುಟುಂಬದವರ ಆಕ್ರಂದನ ಮುಗಿಲು ಮುಟ್ಟಿದ್ದು, ಗ್ರಾಮದಲ್ಲೂ ಶೋಕದ ವಾತಾವರಣ ನಿರ್ಮಾಣವಾಗಿದೆ. ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಸರ್ಕಾರಿ ಉದ್ಯೋಗ ಪಡೆದು ಕುಟುಂಬದ ಕನಸುಗಳನ್ನು ನನಸಾಗಿಸಬೇಕೆಂಬ ಆಶಯ ಹೊಂದಿದ್ದ ಯುವಕನ ಅಕಾಲಿಕ ಸಾವು ಎಲ್ಲರನ್ನೂ ಮರುಗುವಂತೆ ಮಾಡಿದೆ.

**ಪೊಲೀಸ್ ತನಿಖೆ :** ಘಟನೆ ಕುರಿತು ಧಾರವಾಡ ಉಪನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಸ್ಥಳ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ವರದಿ ಬಂದ ಬಳಿಕ ಸಾವಿನ ನಿಖರ ಕಾರಣ ಸ್ಪಷ್ಟವಾಗಲಿದೆ.

ಪ್ರಾಥಮಿಕ ಮಾಹಿತಿಯ ಪ್ರಕಾರ ಹೃದಯಾಘಾತದಿಂದ ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಯುವಕರಲ್ಲಿ ಹೆಚ್ಚುತ್ತಿರುವ ಹೃದಯ ಸಂಬಂಧಿ ಸಮಸ್ಯೆಗಳ ಬಗ್ಗೆ ಆತಂಕ: ಇತ್ತೀಚಿನ ವರ್ಷಗಳಲ್ಲಿ ಕಡಿಮೆ ವಯಸ್ಸಿನವರಲ್ಲಿಯೂ ಹೃದಯಾಘಾತದ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ನಿರಂತರ ಒತ್ತಡ, ಜೀವನಶೈಲಿಯ ಬದಲಾವಣೆ, ನಿದ್ರಾಹೀನತೆ ಹಾಗೂ ಆರೋಗ್ಯ ಸಮಸ್ಯೆಗಳು ಇಂತಹ ಘಟನೆಗಳಿಗೆ ಕಾರಣವಾಗಿರಬಹುದೆಂದು ಆರೋಗ್ಯ ತಜ್ಞರು ಅಭಿಪ್ರಾಯಪಡುತ್ತಿದ್ದಾರೆ.



ವೀರಣ್ಣ ಹೂಲಿಯವರಿಗೆ ಇಂದಿರಾ ಗಾಜಿನ ಮನೆಯ ಶಿವಾ ವಾಕಿಂಗ್ ಗ್ರೂಪ್ ವತಿಯಿಂದ ಸನ್ಮಾನಿಸಲಾಯಿತು. ಪರುಶರಾಮ ಚಿಲ್ಲಾಳ, ಮಲ್ಲಣ್ಣ ಇದ್ದಲಗಿ, ಸಂಗಣ್ಣ ಸಣ್ಣಕಿ, ವಿಶ್ವನಾಥ್ ಗುಡ್ಡದ, ಸುರೇಶ ತಿರಕ್ಕಣ್ಣವರ, ಮಹದೇವ್ ಅಗಳಿ, ಚನ್ನಪ್ಪ ಕೆಂಗಾಪುರ, ಶಿವಾನಂದ ಜೋಗಿನ, ಚಂದಾಲಿಂಗೇಶ್ವರ ಬಾರಕೇರ ಮುಂತಾದವರು ಉಪಸ್ಥಿತರಿದ್ದರು.

# ತಂಗಡಗಿ ಗ್ರಾ.ಪಂ ವ್ಯಾಪ್ತಿಯ ನರೇಗಾ ಕಾಮಗಾರಿ ಸ್ಥಳಕ್ಕೆ ತಾಪಂ ಇಒ ಸಂಗನಗೌಡ ಬಿರಾದಾರ ಭೇಟಿ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲೂಕಿನ ತಂಗಡಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಕೈಗೊಂಡಿರುವ ಕ್ಯಾನಲ್ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ತಾಲೂಕು ಪಂಚಾ ಯತ್ ಕಾರ್ಯನಿರ್ವಾಹಕ ಅಧಿಕಾರಿ (EO) ಸಂಗನಗೌಡ ಬಿರಾದಾರ ಅವರು ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸದರಿ ಕಾಮಗಾರಿಯಲ್ಲಿ ತಂಗಡಗಿ ಹಾಗೂ ಅಮರಗೋಳ ಗ್ರಾಮದ ನರೇಗಾ ಕೂಲಿಕಾರರಿಗೆ ಕೆಲಸ ಒದಗಿಸಲಾಗಿದ್ದು, ಬೇಡಿಕೆ ಸಲ್ಲಿಸಿದ್ದ ಎಲ್ಲ ಕೂಲಿಕಾರರಿಗೂ ಎನ್ಎಂಆರ್ (NMR) ಸೃಜನೆ ಮಾಡಲಾಗಿದೆ. ಪ್ರಸ್ತುತ ಸ್ಥಳದಲ್ಲಿ 123 ಮಹಿಳೆಯರು, 32 ಪುರುಷರು ಸೇರಿದಂತೆ ಒಟ್ಟು 155 ಕೂಲಿಕಾರರು ಕೆಲಸ ನಿರ್ವಹಿಸುತ್ತಿದ್ದಾರೆ.

**ಕೂಲಿ ದರ 370; ನಿಯಮ ಪಾಲನೆ ಕಡ್ಡಾಯ:** ಕಾಮಗಾರಿ ಸ್ಥಳದಲ್ಲಿ ಕೂಲಿಕಾರ ರೊಂದಿಗೆ ಮಾತನಾಡಿದ ಇಒ ಸಂಗನಗೌಡ ಬಿರಾದಾರ ಅವರು, "ನರೇಗಾ ಯೋಜನೆಯಡಿ ಎನ್ಎಂಎಂಎಸ್ (NMMS) ಆ್ಯಪ್ ಮುಖಾಂತರ ದಿನಕ್ಕೆ ಎರಡು ಬಾರಿ ಹಾಜರಾತಿ ಹಾಕುವುದು ಕಡ್ಡಾಯವಾಗಿದೆ. ಕೂಲಿಕಾರರು ಕಾಮಗಾರಿ ಸ್ಥಳದಲ್ಲಿ ಎಚ್ಚರಿಕೆಯಿಂದ ಕೆಲಸ ಮಾಡಬೇಕು. ಪ್ರಸ್ತುತ ದಿನಕ್ಕೆ 370 ಕೂಲಿ ದರ ಇದ್ದು, ಇದು ಕೂಲಿಕಾರರ ಆರ್ಥಿಕ ಸ್ವಾವಲಂಬನೆಗೆ ಸಹಕಾರಿಯಾಗಲಿದೆ. ಗ್ರಾಮೀಣ ಭಾಗದ ಯಾರು ಕೂಡ ಈ ಯೋಜನೆಯಿಂದ ವಂಚಿತರಾಗಬಾರದು" ಎಂದು ತಿಳಿಸಿದರು.

**ವಿಶೇಷ ರಿಯಾಯಿತಿಗಳ ಮಾಹಿತಿ:** "ಬೇಸಿಗೆ ಅವಧಿಯಿರುವುದರಿಂದ ಎಲ್ಲ ಕೂಲಿಕಾರರಿಗೆ ಶೇ.30 ರಷ್ಟು ಕೆಲಸದ ರಿಯಾಯಿತಿ ಇರುತ್ತದೆ. ಇನ್ನು ಗರ್ಭಿಣಿಯರು, ವಯೋವೃದ್ಧರು ಹಾಗೂ ವಿಕಲಚೇತನರಿಗೆ ಶೇ.50 ರಷ್ಟು ಕೆಲಸದ ರಿಯಾಯಿತಿ ಇದ್ದು, ಎಲ್ಲರಿಗೂ ಪೂರ್ಣ ಕೂಲಿ ಪಾವತಿಯಾಗಲಿದೆ" ಎಂದು ಇಒ ಅವರು ನಿಯಮಗಳ ಕುರಿತು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಕಾಯಕಬಂಧುಗಳಾದ ಅಜ್ಜುಂ ವಾಲೀಕಾರ ಹಾಗೂ ಸುಮಿತ್ರಾ ಹುಣಶ್ಯಾಳ ಅವರು ಇಒ ಗಮನಕ್ಕೆ ತಂದು, "ಗ್ರಾಮ ಪಂಚಾಯತಿಯವರು ಕಳೆದ ಬೇಸಿಗೆ ತಿಂಗಳಿನಿಂದ ನಮಗೆ ನಿರಂತರವಾಗಿ ಕೆಲಸ ನೀಡುತ್ತಿದ್ದಾರೆ. ಪ್ರಾರಂಭದಲ್ಲಿ 40 ರಷ್ಟಿದ್ದ ಕೂಲಿಕಾರರ ಸಂಖ್ಯೆ ಈಗ 170 ಕ್ಕೆ ಏರಿದೆ. ಕುಡಿಯುವ ನೀರು ಹಾಗೂ ನೆರಳಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ಇನ್ನು ಹೆಚ್ಚಿನ ಕೂಲಿಕಾರರು ಬರಲು ಆಸಕ್ತಿ ತೋರುತ್ತಿದ್ದಾರೆ" ಎಂದರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಇಒ ಅವರು, ಬೇಡಿಕೆ ಸಲ್ಲಿಸುವ ಎಲ್ಲ ಕೂಲಿಕಾರರಿಗೂ ಕೆಲಸ ಒದಗಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ನರೇಗಾ ಯೋಜನೆಯ ತಾಲೂಕು ಐಇಸಿ ಸಂಯೋಜಕ ಪರಮೇಶ ಹೊಸಮನಿ, ಡಿಇಒ ಶ್ರೀಕಾಂತ, ಕಾಯಕಬಂಧು ಷರೀಫ್ ಮಹ್ಮದ್ ಸಾಬ್ ವಾಲೀಕಾರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಯುವನಿಧಿ ಯೋಜನೆಯ ಫಲಾನುಭವಿಗಳ ದಾಖಲಾತಿ ಪರಿಶೀಲನೆ

**ಬೆಳಗಾವಿ ವಾರ್ತೆ ಗದಗ:** ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 05 ಗ್ಯಾರೆಂಟಿ ಯೋ ಜನೆಗಳಲ್ಲಿ 05ನೇ ಗ್ಯಾರೆಂಟಿ ಯೋಜನೆಯಾದ ಯುವನಿಧಿ ಯೋಜನೆಯಲ್ಲಿ ಪದವಿದ 'ರರಿಗೆ 3000/- ಮತ್ತು ಡಿಪ್ಲೋಮದರರಿಗೆ 1500/- ಗಳನ್ನು ನಿರುದ್ಯೋಗಿ ಭತ್ಯಯಾಗಿ ನಿಡುತ್ತಿದ್ದು 2023, 2024, 2025 ಹಾಗೂ 2026 ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊ ಳ್ಳಬಹುದಾಗಿದ್ದು ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಯಾಗಿ 180 ದಿನಗಳನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಗೆ ನೇರ ನಗದು ಹಣ ವರ್ಗಾವಣೆ ಮಾಡಲಾಗಿರುತ್ತದೆ. ಅಭ್ಯರ್ಥಿಗಳು ಈ ಪ್ರಯೋಜನ ಪ್ರತಿ ತಿಂಗಳು ಪಡೆಯಲು, ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಾಗಿಲ್ಲವೆಂದು, ಸ್ವಯಂ ಘೋಷಣೆಯನ್ನು ಪ್ರತಿ ಮಾಹೆ (ತಿಂಗಳು) ದಿನಾಂಕಃ 01 ರಿಂದ 25 ರೊಳಗಾಗಿ ಸಲ್ಲಿಸಬೇಕು. ಮತ್ತು ಹೊಸದಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ದಾಖಲೆ ಪರಿಶಿಲನೆಗಾಗಿ ತಮ್ಮ ಎಲ್ಲಾ ಮೂಲ ದಾಖಲೆಗಳೂ ಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಜಿಲ್ಲಾ ಆಡಳಿತ ಭವನ 2 ನೇಯ ಮಹಡಿ ರೂಂ.ನಂ:- 215 ಕ್ಕೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಃ 08372-220609, 9901203229 ಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಯಾದ ಬಸವಂತ ಪಿ.ಎನ್ ಪ್ರಕಟನೆಯಲ್ಲಿ ತಿಳಿಸಿದ್ದಾರೆ.



**ಬೆಳಗಾವಿ ವಾರ್ತೆ ಧಾರವಾಡ:** ಕಾಂಗ್ರೆಸ್ ಪಕ್ಷದ ಹಿರಿಯರೂ, ವಿಧಾನ ಪರಿಷತ್ ಸದಸ್ಯರಾದ ಬಿ . ಕೆ. ಹರಿಪ್ರಸಾದ ರವರು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾಗಿ ನೇಮಕಗೊಂಡ ಹಿನ್ನೆಲೆಯಲ್ಲಿ ಬೆಂಗಳೂರ ಸದಾಶಿವ ನಗರದಲಿರುವ ಅವರ ನಿವಾಸದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಹುಬ್ಬಳ್ಳಿ ಧಾರವಾಡ ಎಸ್ ಎಸ್ ಕೆ ಸಮಾಜದ ಅಧ್ಯಕ್ಷರಾದ ಸತೀಶ ಮೇಹರವಾಡೆ ಅವರ ನೇತೃತ್ವದಲ್ಲಿ ಶಾಲು ಹೊದಿಸಿ ಸನ್ಮಾನಿಸಿ ಶುಭ ಕೋರಲಾಯಿತು. ಈ ಸಂದರ್ಭದಲ್ಲಿ ಹಿರಿಯ ಕಾಂಗ್ರೆಸ್ ಮುಖಂಡರಾದ ಗಂಗಾಧರ ದೊಡವಾಡ, ಮಹೇಶ ದಾಬಡೆ, ವಿಶ್ವನಾಥ ಮೆಹರವಾಡೆ, ಗಿರೀಶ ಮಲೆನಾಡು, ಅರವಿಂದ ಮೆಹರವಾಡೆ, ರಘು ಅರಸಿದ್ದ, ಇರ್ಫಾನ್, ರಘು ಉಪಾಧ್ಯಾಯ, ರಘುನಾಥ ಸಿಂಗ್ ಮುಂತಾದವರು ಉಪಸ್ಥಿತರಿದ್ದರು.

# ಮಳೆ ಹಾನಿ ಪರಿಹಾರದಲ್ಲಿ ವಿಳಂಬ ಸಹಿಸುವುದಿಲ್ಲ; ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಕ್ರಮ: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್



**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯಲ್ಲಿ ಮುಂಗಾರು ಮಳೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆ, ಕುಡಿಯುವ ನೀರಿನ ಪೂರೈಕೆ, ಮಳೆ ಹಾನಿ ಪರಿಹಾರ, ಕೃಷಿ ಚಟುವಟಿಕೆಗಳಿಗೆ ಅಗತ್ಯ ಬೀಜ ಹಾಗೂ ಗೊಬ್ಬರಗಳ ಲಭ್ಯತೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವ ಹಿಸಬೇಕು. ಮಳೆಯಿಂದ ಉಂಟಾಗುವ ಹಾನಿಗೆ ತ್ವರಿತವಾಗಿ ಸ್ಪಂದಿಸಿ ಪರಿಹಾರ ಒದಗಿಸಬೇಕು. ಯಾವುದೇ ಕಾರಣಕ್ಕೂ ವಿಳಂಬ, ನಿರ್ಲಕ್ಷ್ಯ ಅಥವಾ ನಿಷ್ಕಾಳಜಿ ಯನ್ನು ಜಿಲ್ಲಾಡಳಿತ ಸಹಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಜಿಲ್ಲಾಡಳಿತ ಭವನದ ಕೋರ್ಟ್ ಹಾಲ್‌ನಲ್ಲಿ ಬುಧವಾರ (ಜೂ.3) ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಭೆಯಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳ ಸಿದ್ಧತೆ, ಮುಂಗಾರು ಮಳೆಯ ಪರಿಣಾಮ, ಕುಡಿಯುವ ನೀರಿನ ಸ್ಥಿತಿ, ಬೆಳೆ ಹಾನಿ, ಮನೆ ಹಾನಿ ಹಾಗೂ ಪರಿಹಾರ ವಿತರಣೆಯ ಪ್ರಗತಿ ಕುರಿತು ಸುದೀರ್ಘ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಅಧಿಕಾರಿಗಳು ಸಭೆಗೆ ಸಂಪೂರ್ಣ ಹಾಗೂ ನಿಖರ ಮಾಹಿತಿಯೊಂದಿಗೆ ಹಾಜರಾಗಬೇಕು ಎಂದು ಸೂಚಿಸಿದರು.

ಸಭೆಗೆ ಸುಳ್ಳು ಅಥವಾ ಅಪೂರ್ಣ ಮಾಹಿತಿ ನೀಡುವುದು ಗಂಭೀರ ವಿಷಯವಾಗಿದ್ದು, ಇಂತಹ ನಿರ್ಲಕ್ಷ್ಯವನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ ಎಂದು ಅವರು ಎಚ್ಚರಿಸಿದರು.

ತಾಲ್ಲೂಕುವಾರು ಮಳೆಯಿಂದ ಹಾನಿಗೀಡಾದ ಮನೆಗಳು, ಬೆಳೆಗಳು ಹಾಗೂ ಸಾರ್ವಜನಿಕ ಆಸ್ತಿಪಾಸ್ತಿಗಳ ಕುರಿತು ಮಾಹಿತಿ ಪಡೆದು, ಅರ್ಹ ಫಲಾನುಭವಿಗಳಿಗೆ ಪರಿಹಾರ ವಿತರಣೆಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಪರಿಹಾರ ವಿತರಣೆಯಲ್ಲಿ ವಿಳಂಬ ಉಂಟಾಗುವುದು ಸಂತ್ರಸ್ತರಿಗೆ ಮತ್ತಷ್ಟು ತೊಂದರೆ ಉಂಟುಮಾಡುವುದರಿಂದ ಈ ವಿಷಯದಲ್ಲಿ ಅಧಿಕಾರಿಗಳು ವಿಶೇಷ ಗಮನ ಹರಿಸಬೇಕು ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಸೂಚಿಸಿದರು.

ಮಳೆಯಾಗುವ ಸಂದರ್ಭದಲ್ಲಿಯೇ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ಜನ ಹಾಗೂ ಜಾನುವಾರುಗಳ ಜೀವಹಾನಿ ತಡೆಯಲು ಅಗತ್ಯ ಕ್ರಮ ಕೈಗೊಳ್ಳಬೇಕು. ಮಳೆ ಹಾನಿಯ ಪ್ರಮಾಣ ಕಡಿಮೆ ಮಾಡುವ ನಿಟ್ಟಿನಲ್ಲಿ ಮುಂಚಿತ ಸಿದ್ಧತೆ ಹಾಗೂ ತುರ್ತು ಸ್ಪಂದನೆ ಅತ್ಯಂತ ಅಗತ್ಯವಾಗಿದೆ. ಯಾವುದೇ ಘಟನೆ ಸಂಭವಿಸಿದ ನಂತರ ಕ್ರಮ ಕೈಗೊಳ್ಳುವ ಬದಲು ಮುನ್ನೆಚ್ಚರಿಕೆ ಕ್ರಮಗಳಿಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಪೂರೈಕೆ ವ್ಯತ್ಯಯವಾಗದಂತೆ ಅಧಿಕಾರಿಗಳು ನಿಗಾ ವಹಿಸಬೇಕು. ಸಾರ್ವಜನಿಕರಿಗೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಈ ವಿಷಯದಲ್ಲಿ ನಿರ್ಲಕ್ಷ್ಯ ತೋರಬಾರದು. ಗ್ರಾಮೀಣ ಪ್ರದೇಶಗಳ ಜೊತೆಗೆ ನಗರ ಪ್ರದೇಶಗಳಲ್ಲಿಯೂ ನೀರು ಸರಬರಾಜು ವ್ಯವಸ್ಥೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಬೇಕು ಎಂದು ಸಿ ಎನ್ ಶ್ರೀಧರ ಸೂಚಿಸಿದರು.

ಪ್ರವಾಹ ಉಂಟಾಗುವ ಸಾಧ್ಯತೆ ಇರುವ ತಗ್ಗು ಪ್ರದೇಶಗಳಲ್ಲಿ ವಾಸಿಸುವ ಕುಟುಂಬಗಳನ್ನು ಮುಂಚಿತವಾಗಿ ಗುರುತಿಸಿ, ಅಗತ್ಯವಿದ್ದರೆ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವ ಕುರಿತು ಸೂಚನೆ ನೀಡಬೇಕು. ಯಾವುದೇ ಅನಾಹುತ ಸಂಭವಿಸದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಣ್ಣ ನೀರಾವರಿ ಇಲಾಖೆಗೆ ಸಂಬಂಧಿಸಿದ 23 ಕೆರೆಗಳ ನಿರ್ವಹಣಾ ಕ್ರಮಗಳ ಕುರಿತು ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಕೆರೆಗಳ ನಿರ್ವಹಣೆ ಹಾಗೂ ನೀರು ಸಂಗ್ರಹ ಸಾಮರ್ಥ್ಯ ವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಕೆರೆಗಳಿಗೆ ನೀರು ತುಂಬಿಸಲು ಹಾಗೂ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲು ಬೇಕಾದ ಅನುದಾನದ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಿದರು.

ಪ್ರವಾಹ ಸೇರಿದಂತೆ ತುರ್ತು ಪರಿಸ್ಥಿತಿಗಳ ಸಂದರ್ಭದಲ್ಲಿ ರಕ್ಷಣಾ ಕಾರ್ಯಗಳನ್ನು ಪರಿಣಾಮಕಾರಿಯಾಗಿ ನಡೆಸಲು ಅಗ್ನಿಶಾಮಕ ಇಲಾಖೆಗೆ ಅಗತ್ಯವಿರುವ ಬೋಟ್‌ಗಳ ಖರೀದಿಗಾಗಿ ಸೂಕ್ತ ಪ್ರಸ್ತಾವನೆಯನ್ನು ಜಿಲ್ಲಾಡಳಿತದ ಮೂಲಕ ಕೇಂದ್ರ ಕಚೇರಿಗೆ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ನೀಡಿದ ಮಾಹಿತಿಯ ಪ್ರಕಾರ, ಮೇ 18ರಂದು ಸುರಿದ ಭಾರಿ ಮಳೆ ಹಾಗೂ ಬಿರುಗಾಳಿಯಿಂದ ಗದಗ ಮತ್ತು ಲಕ್ಷ್ಮೇಶ್ವರ ತಾಲ್ಲೂಕುಗಳಲ್ಲಿ ತಲಾ ಒಬ್ಬರಂತೆ ಒಟ್ಟು 2 ಜನರು ಮೃತಪಟ್ಟಿದ್ದು, ಮೃತರ ಕುಟುಂಬಗಳಿಗೆ ತಲಾ ?5 ಲಕ್ಷದಂತೆ ಪರಿಹಾರ ವಿತರಿಸಲಾಗಿದೆ. ಮಳೆಯಿಂದ ಮೃತಪಟ್ಟ 31 ಸಣ್ಣ ಸಾಕು ಪ್ರಾಣಿಗಳ ಮಾಲೀಕರಿಗೆ ಒಟ್ಟು ?1.52 ಲಕ್ಷ ಪರಿಹಾರ ನೀಡಲಾಗಿದೆ.

ಪ್ರಸಕ್ತ ಸಾಲಿನ ಪೂರ್ವ ಮುಂಗಾರು ಮಳೆಯಿಂದ ಜಿಲ್ಲೆಯಲ್ಲಿ ಇದುವರೆಗೆ 14 ಮನೆಗಳು ಭಾಗಶಃ ಹಾನಿಗೀಡಾಗಿದ್ದು, ಸಂಬಂಧಿಸಿದ ಕುಟುಂಬಗಳಿಗೆ ಒಟ್ಟು ?91 ಸಾವಿರ ಪರಿಹಾರ ವಿತರಿಸಲಾಗಿದೆ. ಅಲ್ಲದೇ 96 ಮನೆಗಳಿಗೆ ನೀರು ನುಗ್ಗಿ ಹಾನಿಯಾಗಿದ್ದು, ಆ ಕುಟುಂಬಗಳಿಗೆ ಒಟ್ಟು ?4.80 ಲಕ್ಷ ಪರಿಹಾರವನ್ನು ನೀಡಲಾಗಿದೆ.

ಮಳೆಯಿಂದ ಜಿಲ್ಲೆಯ ವಿವಿಧ ಭಾಗಗಳಲ್ಲಿ 907 ವಿದ್ಯುತ್ ಕಂಬಗಳು ಹಾಗೂ 10 ಶಾಲಾ ಕೊಠಡಿಗಳು ಹಾನಿಗೀಡಾಗಿವೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿ (ಓಆಖಈ) ಮಾನದಂಡಗಳ ಪ್ರಕಾರ ಈ ಹಾನಿಯ ಅಂದಾಜು ಮೊತ್ತ 69.35 ಲಕ್ಷ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಅದೇ ರೀತಿ ಜಿಲ್ಲೆಯ 92 ರೈತರಿಗೆ ಸೇರಿದ 34.58 ಎಕರೆ ತೋಟಗಾರಿಕೆ ಪ್ರದೇಶ ಮಳೆಯಿಂದ ಹಾನಿಗೀಡಾಗಿದ್ದು, ಇದರ ಹಾನಿಯ ಮೌಲ್ಯವನ್ನು ಓಆಖಈ ಮಾನದಂಡಗಳ ಪ್ರಕಾರ ?6.70 ಲಕ್ಷ ಎಂದು ಅಂದಾಜಿಸಲಾಗಿದೆ.

ಜಿಲ್ಲೆಯ ಕುಡಿಯುವ ನೀರಿನ ಸ್ಥಿತಿಗತಿಯ ಕುರಿತು ಮಾಹಿತಿ ನೀಡಿದ ಅಧಿಕಾರಿಗಳು, ನವಿಲುತೀರ್ಥ ಜಲಾಶಯದಲ್ಲಿ ಪ್ರಸ್ತುತ 5.905 ಟಿಎಂಸಿ, ಭದ್ರಾ ಜಲಾಶಯದಲ್ಲಿ 16.497 ಟಿಎಂಸಿ ಹಾಗೂ ಹಮ್ಮಿಗಿ ಬ್ಯಾರೇಜ್‌ನಲ್ಲಿ 1.978 ಟಿಎಂಸಿ ನೀರು ಸಂಗ್ರಹವಿದೆ ಎಂದು ತಿಳಿಸಿದರು. ಲಭ್ಯವಿರುವ ನೀರಿನ ಸಂಗ್ರಹದಿಂದ ಮುಂದಿನ 90 ದಿನಗಳವರೆಗೆ ಜಿಲ್ಲೆಯ ಜನರಿಗೆ ಕುಡಿಯುವ ನೀರು ಪೂರೈಸಲು ಸಾಧ್ಯವಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ ಇರುವ 63 ಗ್ರಾಮಗಳನ್ನು ಜಿಲ್ಲಾಡಳಿತ ಗುರುತಿಸಿದ್ದು, ಅಲ್ಲಿ ವಿಶೇಷ ನಿಗಾವಹಿಸಿ ನೀರು ಪೂರೈಕೆ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದರು. ನಗರ ಪ್ರದೇಶಗಳಲ್ಲಿ ಗದಗ-ಬೆಟಗೇರಿ ನಗರಸಭೆಯ 35 ವಾರ್ಡುಗಳು ಸೇರಿದಂತೆ ಜಿಲ್ಲೆಯ ಒಟ್ಟು 69 ವಾರ್ಡುಗಳನ್ನು ಸಮಸ್ಯಾತ್ಮಕ ಪ್ರದೇಶಗಳೆಂದು ಗುರುತಿಸಲಾಗಿದೆ.

ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ 204 ವಾರ್ಡುಗಳಲ್ಲಿ ಒಟ್ಟು 1,196 ಬೋರ್‌ವೆಲ್‌ಗಳಿದ್ದು, ಅವುಗಳಲ್ಲಿ 923 ಬೋರ್‌ವೆಲ್‌ಗಳು ಕಾರ್ಯನಿರ್ವಹಿಸುತ್ತಿವೆ. ಜಿಲ್ಲೆಯ 51 ಆರ್‌ಒ ಕುಡಿಯುವ ನೀರಿನ ಶುದ್ಧೀಕರಣ ಘಟಕಗಳ ಪೈಕಿ 35 ಘಟಕಗಳು ಕಾರ್ಯನಿರ್ವಹಿಸುತ್ತಿವೆ ಎಂದು ಸಭೆಗೆ ಮಾಹಿತಿ ನೀಡಲಾಯಿತು.

ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ಯೂರಿಯಾ, ಡಿಎಪಿ ಸೇರಿದಂತೆ ಒಟ್ಟು 67,536 ಮೆಟ್ರಿಕ್ ಟನ್ ರಸಗೊಬ್ಬರಗಳ ಬೇಡಿಕೆಯಿದ್ದು, ಇದುವರೆಗೆ 18,963 ಮೆಟ್ರಿಕ್ ಟನ್ ರಸಗೊಬ್ಬರ ಮಾರಾಟವಾಗಿದೆ. ಪ್ರಸ್ತುತ 14,688 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದ್ದು, ರೈತರಿಗೆ ಅಗತ್ಯ ಪ್ರಮಾಣದಲ್ಲಿ ಗೊಬ್ಬರ ಪೂರೈಕೆಗೆ ಯಾವುದೇ ಸಮಸ್ಯೆ ಇಲ್ಲ ಎಂದು ಕೃಷಿ ಇಲಾಖೆ ಅಧಿಕಾರಿಗಳು ವಿವರಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಕೆ.ಆರ್. ದುರಗೇಶ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಡಿಡಿಪಿಐ ಆರ್.ಎಸ್. ಬುರಡಿ, ಪಶು ಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ. ಎಚ್.ಬಿ. ಹುಲಗಣ್ಣನವರ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ, ಕಾರ್ಮಿಕ ಇಲಾಖೆ ಜಿಲ್ಲಾ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಎಲ್ಲಾ ತಾಲ್ಲೂಕುಗಳ ತಹಸೀಲ್ದಾರರು, ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

ಮುಂಗಾರು ಹಂಗಾಮು ಆರಂಭವಾಗಿರುವುದರಿಂದ ರೈತರಿಗೆ ಅಗತ್ಯವಿರುವ ಬೀಜ ಹಾಗೂ ರಸಗೊಬ್ಬರಗಳು ಯಾವುದೇ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಯೂರಿಯಾ ಸೇರಿದಂತೆ ಯಾವುದೇ ರಸಗೊಬ್ಬರ ವಿತರಣೆ ವೇಳೆ ರೈತರಿಗೆ ಅನಗತ್ಯವಾಗಿ ಇತರೆ ಗೊಬ್ಬರಗಳನ್ನು ಖರೀದಿಸುವಂತೆ ಒತ್ತಾಯ ಮಾಡಬಾರದು. ಇಂತಹ ದೂರುಗಳು ಅಥವಾ ಪ್ರಕರಣಗಳು ಕಂಡುಬಂದರೆ ಸಂಬಂಧಿಸಿದವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು ಎಂದು ಡಿಸಿ ಸಿ ಎನ್ ಶ್ರೀಧರ್ ಹೇಳಿದರು.

**ಶೋಕಾಸ ನೋಟಿಸ್ :** ಸಭೆಯಲ್ಲಿ ಅಂತರ್ಜಲ ಇಲಾಖೆಯ ಹಿರಿಯ ಭೂವಿಜ್ಞಾನಿಗಳು ಗೈರಾಗಿದ್ದಲ್ಲದೇ ಅಗತ್ಯ ಮಾಹಿತಿಯನ್ನು ಸಮರ್ಪಕವಾಗಿ ಒದಗಿಸದಿರುವುದನ್ನು ಜಿಲ್ಲಾಧಿಕಾರಿಗಳು ಗಂಭೀರವಾಗಿ ಪರಿಗಣಿಸಿದರು. ಈ ಹಿನ್ನೆಲೆಯಲ್ಲಿ ಅವರಿಗೆ ಶೋಕಾಸ್ ನೋಟಿಸ್ ಜಾರಿಗೊಳಿಸುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

# ಮೃತ ಕುಟುಂಬಕ್ಕೆ ಧೈರ್ಯ ತುಂಬಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

## ಯಾರೇ ಇದ್ದರೂ ಮುಲಾಜಿಲ್ಲದೇ ಕಠಿಣ ಶಿಕ್ಷೆ: ನಾಗರಬೆಟ್ಟ ಗ್ರಾಮದಲ್ಲಿ ಎಸ್ಪಿ ಭರವಸೆ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಬಸವನ ಬಾಗೇವಾಡಿ ತಾಲೂಕಿನ ಹಂಗರಗಿ ಗ್ರಾಮದ ಖಾಸಗಿ ಕಂಪನಿಯಲ್ಲಿ ನಡೆದ ದಲಿತ ಯುವಕ ರವಿಚಂದ್ರ ಮಾದರ ಹತ್ಯೆ ಆರೋಪದ ತನಿಖೆಯು ಅತ್ಯಂತ ಪಾರದರ್ಶಕವಾಗಿ ನಡೆಯುತ್ತಿದೆ. ಸಾರ್ವಜನಿಕರು ಹಾಗೂ ನೊಂದ ಕುಟುಂಬಸ್ಥರು ಪೊಲೀಸ್ ಇಲಾಖೆಯು ಮೇಲೆ ಸಂಪೂರ್ಣ ನಂಬಿಕೆ ಇಡಬೇಕು. ಅಪರಾಧಿಗಳು ಎಷ್ಟೇ ಪ್ರಭಾವಿಯಾಗಿದ್ದರೂ ಮುಲಾಜಿಲ್ಲದೇ ಶಿಕ್ಷೆಯಾಗುತ್ತದೆ ಎಂದು ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್ಪಿ) ಲಕ್ಷ್ಮಣ್ ನಿಂಬರಗಿ ಭರವಸೆ ನೀಡಿದ್ದಾರೆ.

ಯುವಕನ ಕೊಲೆ ಹಿನ್ನೆಲೆಯಲ್ಲಿ ಮೃತನ ಸ್ವಗ್ರಾಮವಾದ ಮುದ್ದೇಬಿಹಾಳ ತಾಲ್ಲೂಕಿನ ನಾಗರಬೆಟ್ಟ ಗ್ರಾಮಕ್ಕೆ ಮಂಗಳವಾರ ಸಂಜೆ ಖುದ್ದಾಗಿ ಭೇಟಿ ನೀಡಿದ ಎಸ್ಪಿಯವರು, ನೊಂದ ಕುಟುಂಬದ ಸದಸ್ಯರು ಹಾಗೂ ದಲಿತ ಮುಖಂಡರನ್ನು ಭೇಟಿಯಾಗಿ ಘಟನೆಯ ಸಂಪೂರ್ಣ ಮಾಹಿತಿ ಪಡೆದುಕೊಂಡರು.

**ಇಲಾಖೆ ಮೇಲೆ ಭರವಸೆ ಇಡಿ:**

ಘಟನೆಯ ಇಂಚಿಂಚೂ ವಿವರಗಳನ್ನು ಕಲೆಹಾಕಿದ ಎಸ್ಪಿ ಲಕ್ಷ್ಮಣ್ ನಿಂಬರಗಿ, ಪ್ರಕರಣದ ತನಿಖೆಯು ಈಗಾಗಲೇ ಡಿಸಿಇಆರ್ ವಿಭಾಗದ ಅಂಗಳದಲ್ಲಿದ್ದು, ಸೂಕ್ತ ರೀತಿಯಲ್ಲಿ ತನಿಖೆ ಪ್ರಗತಿಯಲ್ಲಿದೆ. ಕೊಲೆಗೆ ನಿಖರ ಕಾರಣವೇನು? ಈ ಹಿಂದೆ ಏನಾದರೂ ಸಂಶಯಾಸ್ಪದ ಘಟನೆಗಳು ನಡೆದಿದ್ದವೇ? ಎಂಬ ಬಗ್ಗೆ ಯಾವುದೇ ಮಾಹಿತಿ ಇದ್ದರೂ ಸಾರ್ವಜನಿಕರು ಭಯವಿಲ್ಲದೆ ಇಲಾಖೆಗೆ ತಿಳಿಸಬೇಕು. ಆರೋಪಿಗಳನ್ನು ವಶಕ್ಕೆ ಪಡೆದು ಕಾನೂನು ಕ್ರಮ ಜರುಗಿಸಲು ನ್ಯಾಯಾಲಯಕ್ಕೆ ಬಲವಾದ ಸಾಕ್ಷ್ಯಾಧಾರಗಳು ಬೇಕಾಗುತ್ತವೆ. ತನಿಖೆಯ ಅವಧಿ ಮೂರು ತಿಂಗಳವರೆಗಿದ್ದು, ಅಷ್ಟರೊಳಗೆ ಎಲ್ಲಾ ನಿಖರ ಸಾಕ್ಷ್ಯಗಳು ಲಭ್ಯವಾಗಲಿವೆ. ಅಲ್ಲಿಯವರೆಗೆ ತನಿಖೆಗೆ ಸಹಕರಿಸಿ. ಇಂತಹ ದೌರ್ಜನ್ಯದ ಘಟನೆಗಳಿಗೆ ಪೊಲೀಸ್ ಇಲಾಖೆ ಎಂದಿಗೂ ಆಸ್ಪದ ನೀಡುವುದಿಲ್ಲ. ಇಡೀ ಜಿಲ್ಲಾಡಳಿತವೇ ನಿಮ್ಮ ಬೆನ್ನಿಗಿದೆ ಎಂದು ಧೈರ್ಯ ತುಂಬಿದರು.

**ನೊಂದ ಕುಟುಂಬ ಹಾಗೂ ಮುಖಂಡರ ಮನವಿ:**

ತಾಲೂಕಿನಲ್ಲಿ ಈ ಹಿಂದೆ ನಡೆದ ಕೆಲವು ದಲಿತ ದೌರ್ಜನ್ಯ ಪ್ರಕರಣಗಳನ್ನು ತಿರುಚಿ, ಮುಚ್ಚಿಹಾಕುವ ಕೆಲಸಗಳಾಗಿವೆ. ಆದರೆ, ಈ ಪ್ರಕರಣದಲ್ಲಿ ದಲಿತ ಯುವಕನಿಗೆ ಸೂಕ್ತ ನ್ಯಾಯ ಸಿಗಬೇಕು. ನೊಂದ ಕುಟುಂಬಕ್ಕೆ ಹಾಗೂ ನಾಗರಬೆಟ್ಟ ಗ್ರಾಮಕ್ಕೆ ರಾತ್ರಿಯ ವೇಳೆಯೂ ಸೂಕ್ತ ಪೊಲೀಸ್ ರಕ್ಷಣೆ ಒದಗಿಸಬೇಕು" ಎಂದು ಸ್ಥಳದಲ್ಲಿದ್ದ ಮುಖಂಡರು ಎಸ್ಪಿಯವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ದೌರ್ಜನ್ಯ ಸಮಿತಿಯ ಮಲ್ಲು ತಳವಾರ, ಹರೀಶ ನಾಟಿಕರ್, ಮಾದಿಗ ದಂಡೋರ ಸಮಿತಿ ತಾಲೂಕು ಅಧ್ಯಕ್ಷ ತಿಪ್ಪಣ್ಣ ದೊಡಮನಿ, ಪ್ರಮುಖರಾದ ಗುಂಡಪ್ಪ ಚಲವಾದಿ, ಬಸವರಾಜ ಮಾದರ, ಪ್ರಭು ಚಲವಾದಿ, ಚಂದಪ್ಪ ಮಾದರ ಹಾಗೂ ನೊಂದ ಕುಟುಂಬದ ಹುಲಗಪ್ಪ ಮಾದರ, ತಿಪ್ಪಣ್ಣ ಮಾದರ, ಮಹಾದೇವಪ್ಪ ಕೆಸಾ ಪೂರ, ವೆಂಕಪ್ಪ ದಾಸರ ಉಪಸ್ಥಿತರಿದ್ದರು.

ಅಧಿಕಾರಿಗಳಾದ ಡಿವೈಎಸ್ಪಿ ಚಂದ್ರಕಾಂತ ನಂದರಡ್ಡಿ, ನಿಡಗುಂದಿ ಸಿಪಿಐ ಶರಣಗೌಡ ಗೌಡ್ರ, ಮುದ್ದೇಬಿಹಾಳ ಸಿಪಿಐ ಮಹ್ಮದ ಫಸಿವುದ್ದಿನ್, ಪಿಎಸ್ಐ ಸಂಜಯ್ ತಿಪ್ಪಾರಡ್ಡಿ ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

# ರಾಮಚಂದ್ರ ಹಲಗಿ ನಿಧನ

**ಬೆಳಗಾವಿ ವಾರ್ತೆ ಗೋಕಾಕ:** ಇಲ್ಲಿಯ ಆದಿ ಜಾಂಭವ ನಗರದ ನಿವಾಸಿ ರಾಮಚಂದ್ರ ಬಸವಣ್ಣೆಪ್ಪ ಹಲಗಿ 56 ಇವರು ಬುಧವಾರದಂದು ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ವಾಗ್ದಾನದಂತೆ ಅವರ ಕುಟುಂಬಸ್ಥರು ಲಯನ್ಸ್ ಸಂಸ್ಥೆಯ ಸಹಕಾರ ದೊಂದಿಗೆ ಬೆಳಗಾವಿ ಕೆಎಲ್ಇ ಆಸ್ಪತ್ರೆಗೆ ದೇಹದಾನ ಮಾಡಿದರು. ಈ ಸಂದರ್ಭ ದಲ್ಲಿ ಲಯನ್ಸ ಸಂಸ್ಥೆಯ ಅಧ್ಯಕ್ಷ ಎಸ್ ಎಮ್ ಹಂಜಿ, ಅಶೋಕ ಲಗಮಪ್ಪ ಗೋಳ, ಸುರೇಶ ಶಿಂಧಿಹಟ್ಟಿ, ಶಂಕರ ದೊಡಮನಿ ಸೇರಿದಂತೆ ಅನೇಕರು ಇದ್ದರು.



ರಾಮಚಂದ್ರ ಬಸವಣ್ಣೆಪ್ಪ ಹಲಗಿ.



**ಬೆಳಗಾವಿ ವಾರ್ತೆ ಗೋಕಾಕ:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ತಾಲೂಕಿನ ಧುಪದಾಳ ಗ್ರಾಮದ ಹಿಂದು ರುದ್ರಭೂಮಿ ಅಭಿವೃದ್ಧಿಗಾಗಿ ಶ್ರೀ 1008 ಪಾರ್ಶ್ವನಾಥ ತೀರ್ಥಂಕರ ದಿಗಬಂರ ಜೈನ ಸೇವಾ ಸಂಘಕ್ಕೆ ಡಾ.ವಿರೇಂದ್ರ ಹೆಗಡೆಯವರು ನೀಡಿದ ರೂ1.51630 ಸಹಾಯಧನ ಚೇಕನ್ನು ಯೋಜನಾ ಜಿಲ್ಲಾ ನಿರ್ದೇಶಕ ಎಚ್ ಆರ್ ಲವಕುಮಾರ ಮಂಗಳವಾರದಂದು ವಿತರಿಸಿದರು. ಈ ಸಂದರ್ಭದಲ್ಲಿ ಶ್ರೀಮಂತ ಬೆಳವಿ, ಲಗಮಣ್ಣ ನಾಗನ್ನವರ, ಭರತೇಶ ಪರಪ್ಪನವರ, ಭರಮಪ್ಪ ಚಿಗತಮ್ಮನವರ, ವಿಜಕುಮಾರ ಪಾಟೀಲ, ಶೀತಲ ದೇಮ ನ್ನವರ, ಮಲ್ಲೇಶಿ ಪರಪ್ಪನವರ, ಅಶೋಕ ಚಿಗತಮ್ಮನವರ, ಜೀನಪ್ಪ ಕಮತೆ, ವಿಜಯ ಪರಪ್ಪನವರ, ಯೋಜನಾಧಿಕಾರಿ ರೋಹಿತ ಎಚ್ ಸೇರಿದಂತೆ ಅನೇಕರು ಇದ್ದರು.

# ಹುಲ್ಲೂರು ಎಸ್.ಎನ್.ಡಿ ಶಾಲೆಯಲ್ಲಿ ಸರಳ ಶಾಲಾ ಪ್ರಾರಂಭೋತ್ಸವ: ಮಕ್ಕಳಿಗೆ ಹೂವು ನೀಡಿ ಚಾಲನೆ ನೀಡಿದ ತಹಶೀಲ್ದಾರ್ ಕೀರ್ತಿ ಚಾಲಕ್

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಸೋಮವಾರದಿಂದ ಶಾಲೆಗಳು ಪುನರಾರಂಭಗೊಂಡಿದ್ದು, ತಾಲ್ಲೂಕಿನ ಹುಲ್ಲೂರು ಗ್ರಾಮದ ಎಸ್. ಎನ್.ಡಿ ಪಬ್ಲಿಕ್ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವವನ್ನು ಅತ್ಯಂತ ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು. ಶಾಲೆಯ ಸಂಸ್ಥೆಯ ಅಧ್ಯಕ್ಷ ಎಂ. ಎಸ್.ಕೊಪ್ಪ ಅವರ ನೇತೃತ್ವದಲ್ಲಿ ಶಿಕ್ಷಕ ವೃಂದದವರು ಜಂಟಿಯಾಗಿ ಸರಸ್ವತಿ ದೇವಿಯ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಶೈಕ್ಷಣಿಕ ವರ್ಷಕ್ಕೆ ಚಾಲನೆ ನೀಡಿದರು.

ಇದೇ ವೇಳೆ ಶಾಲೆಗೆ ಅನಿರೀಕ್ಷಿತವಾಗಿ ಭೇಟಿ ನೀಡಿದ ತಾಲ್ಲೂಕಿನ ತಹಶೀಲ್ದಾರ್ ಕೀರ್ತಿ ಚಾಲಕ್ ಅವರು, ಸರಸ್ವತಿ ದೇವಿಗೆ ನಮಸ್ಕರಿಸಿದರು. ನಂತರ ಶಾಲೆಗೆ ಆಗಮಿಸಿದ ಪುಟ್ಟ ಮಕ್ಕಳಿಗೆ ಆತ್ಮೀಯವಾಗಿ ಹೂವುಗಳನ್ನು ನೀಡುವ ಮೂಲಕ ಶಾಲಾ ಆರಂಭೋತ್ಸವಕ್ಕೆ ಚಾಲನೆ ನೀಡಿ, ಮಕ್ಕಳಿಗೆ ಹಾಗೂ ಶಿಕ್ಷಕರಿಗೆ ಶುಭ ಹಾರೈಸಿದರು.

ಬಳಿಕ ಮಾತನಾಡಿದ ತಹಶೀಲ್ದಾರ್ ಕೀರ್ತಿ ಚಾಲಕ್ ಅವರು, "ಗ್ರಾಮೀಣ ಭಾಗದ ಮಕ್ಕಳಿಗೆ ಉತ್ತಮ ಹಾಗೂ ಗುಣಮಟ್ಟದ ಶಿಕ್ಷಣ ಕೊಡುವುದು ಅತ್ಯಂತ ಅಗತ್ಯವಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಮುನ್ನೆಲೆಗೆ ತರುವ ನಿಟ್ಟಿನಲ್ಲಿ ಶಿಕ್ಷಕರು ಮತ್ತು ಪಾಲಕರು ಒಟ್ಟಾಗಿ ಹೆಚ್ಚಿನ ಕಾಳಜಿ ವಹಿಸಿ ಶ್ರಮಿಸಬೇಕು" ಎಂದು ಪ್ರಮುಖ ಸಲಹೆ ನೀಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಎಂ.ಎಸ್.ಕೊಪ್ಪ, ಶಾಲೆಯ ಮುಖ್ಯಗುರು ಮಾತೆ ರೇಖಾ



ಎಂ.ಎಸ್. ಹಾಗೂ ಶಾಲೆ ಯ ಶಿಕ್ಷಕಿಯರು ಸೇರಿದಂತೆ ವಿದ್ಯಾರ್ಥಿ ಗಳು ಉಪಸ್ಥಿತರಿದ್ದರು.

# ದಿ.7ರಂದು ಪ್ರತಿಭಾ ಪುರಸ್ಕಾರ

**ಬೆಳಗಾವಿ ವಾರ್ತೆ ಗೋಕಾಕ:** ನಗರದ ಜೆಸಿಐ ಸಂಸ್ಥೆಯಿಂದ ಚಿಕ್ಕೋಡಿ ಹಾಗೂ ಬೆಳಗಾವಿ ಶೈಕ್ಷಣಿಕ ಜಿಲ್ಲೆಯ ಎಸ್ಎಸ್ಎಲ್ಸಿ ಮತ್ತು ಪಿಯೂಸಿಯಲ್ಲಿ 90%ಪ್ರತಿಶತಕ್ಕಿಂತ ಹೆಚ್ಚಿನ ಅಂಕ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ದಿ.7ರಂದು ಮುಂಜಾನೆ 10ಗಂಟೆಗೆ ಇಲ್ಲಿಯ ಹೆಮರೆಡ್ಡಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ. ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಅಂಕಪಟ್ಟಿಯ ಝರಾಕ್ಸ, ಭಾವಚಿತ್ರ ಹಾಗೂ ಸಂಪೂರ್ಣ ವಿಳಾಸದೊಂದಿಗೆ ಅರ್ಜಿಯನ್ನು ದಿ.06–06–2026ರ ಒಳಗಾಗಿ ನೇರವಾಗಿ ಶ್ರೀರಾಮ ಫೌಂಡೇಷನ, ಲಾತೂರ ಕಂಪ್ಯೂಟರ ಸೆಂಟರ್ ಕೋರ್ಟ ಸರ್ಕಲ್ (ಕೆನರಾ ಬ್ಯಾಂಕ ಕೆಳಗೆ) ಖುದ್ದಾಗಿ ಅಥವಾ ಅಂಚೆಯ ಮೂಲಕ ಕಳಿಸುವಂತೆ ಜೆಸಿಐ ರಾಷ್ಟ್ರೀಯ ಸಂಯೋಜಕ ವಿಷ್ಣು ಲಾತೂರ ಹಾಗೂ ಅಧ್ಯಕ್ಷ ಕಿರಣ ಗಂಗರೆಡ್ಡಿ ಪ್ರಕಟನೆಯಲ್ಲಿ ಕೋರಿದ್ದಾರೆ.

# ಡಿ.ಕೆ. ಶಿವಕುಮಾರ್ ಸಂಪುಟದಲ್ಲಿ ಕೆ.ಎಚ್. ಮುನಿಯಪ್ಪಗೆ ಸಚಿವ ಸ್ಥಾನ: ಕಾಂಗ್ರೆಸ್ ನಿರ್ಧಾರಕ್ಕೆ ವೆಂಕಟೇಶ್ ಹೆಗಡೆ ಸ್ವಾಗತ



**ಬೆಳಗಾವಿ ವಾರ್ತೆ ಬಳ್ಳಾರಿ:** ನಿಷ್ಠಾವಂತ ಕಾಂಗ್ರೆಸ್ ನಾಯಕ, ಅಂಬೇಡ್ಕರ್‌ವಾದಿ ಹಾಗೂ ಅಹಿಂದ ಮುಖಂಡರಾದ ಕೆ.ಎಚ್. ಮುನಿಯಪ್ಪ ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನೂತನ ಸಚಿವ ಸಂಪುಟದಲ್ಲಿ ಸಚಿವರಾಗಿ ನೇಮಕ ಮಾಡಿರುವುದನ್ನು ಹಾಗೂ ಹಿರಿಯ ಗಾಂಧಿವಾದಿ, ಕಾಂಗ್ರೆಸ್ ಧುರೀಣ ಮತ್ತು ಮುತ್ಸದ್ದಿ ರಾಜಕಾರಣಿ ಬಿ.ಕೆ. ಹರಿಪ್ರಸಾದ್ ಅವರನ್ನು ಕೆಪಿಸಿಸಿ ಅಧ್ಯಕ್ಷರಾಗಿ ಆಯ್ಕೆ ಮಾಡಿರುವುದನ್ನು ಕಾಂಗ್ರೆಸ್ ಮುಖಂಡರು ಸ್ವಾಗತಿಸಿದ್ದಾರೆ.

ಈ ಕುರಿತು ಕೆಪಿಸಿಸಿ ಮಾಧ್ಯಮ ವಕ್ತಾರರು ಹಾಗೂ ಕೆಪಿಸಿಸಿ ರಾಜ್ಯ ಪ್ರಚಾರ ಸಮಿತಿಯ ಸಂಯೋಜಕರಾದ ವಕೀಲ ವೆಂಕಟೇಶ್ ಹೆಗಡೆ ಅವರು ಪ್ರಕಟಣೆ ನೀಡಿದ್ದು, ಈ ಇಬ್ಬರು ಹಿರಿಯ ನಾಯಕರಿಗೆ ಸೂಕ್ತ ಸ್ಥಾನಮಾನ ನೀಡಿರುವ ಕಾಂಗ್ರೆಸ್ ಹೈಕಮಾಂಡ್ ನಿರ್ಧಾರವನ್ನು ಶ್ಲಾಘಿಸಿದ್ದಾರೆ.

ಕಾಂಗ್ರೆಸ್ ಪಕ್ಷವು ಹಿಂದುಳಿದ ವರ್ಗಗಳು ಹಾಗೂ ದಲಿತ ಸಮುದಾಯಗಳ ಪರ ಬದ್ಧತೆಯನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದು, ಕೆ.ಎಚ್. ಮುನಿಯಪ್ಪ ಮತ್ತು ಬಿ.ಕೆ. ಹರಿಪ್ರಸಾದ್ ಅವರ ನಾಯಕತ್ವ ರಾಜ್ಯದ ಅಭಿವೃದ್ಧಿ ಹಾಗೂ ಪಕ್ಷದ ಸಂಘಟನೆ ಬಲವರ್ಧನೆಗೆ ಮಹತ್ವದ ಕೊಡುಗೆ ನೀಡಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಈ ಸಂದರ್ಭದಲ್ಲಿ ಬುಡ ಅಧ್ಯಕ್ಷ ಜೆ.ಎಸ್. ಆಂಜನೇಯಲು, ಟಿ. ಆನಂದ್, ಅನಿಲ್, ನಿಂಬಗಲ್ ರಾಮಕೃಷ್ಣ ಸೇರಿದಂತೆ ಹಲವಾರು ಕಾಂಗ್ರೆಸ್ ಮುಖಂಡರು ಇಬ್ಬರು ನಾಯಕರಿಗೆ ಅಭಿನಂದನೆ ಸಲ್ಲಿಸಿದರು.

# ಇಪಿಎಫ್ಓ: ಜೂ.12 ರಂದು ಪಿಂಚಣಿ ಅದಾಲತ್

ಬಳ್ಳಾರಿ: ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಜೂ.12 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಜೂ.10 ರೊಳಗಾಗಿ ರವಾನಿಸಬಹುದಾಗಿದೆ. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392–268943 ಗೆ ಸಂಪರ್ಕಿಸಬಹುದು ಎಂದು ಕ್ಷೇತ್ರಿಯ ಭವಿಷ್ಯ ನಿಧಿ ಆಯುಕ್ತ ಕೆ.ವಿ ಪ್ರವೀಣ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಂಗಾರು ಮಳೆ: ಸಮನ್ವಯತೆಯಿಂದ ಕೆಲಸ ಮಾಡಲು ಅಧಿಕಾರಿಗಳಿಗೆ ಡಿಸಿ ನಾಗೇಂದ್ರ ಪ್ರಸಾದ್.ಕೆ ನಿರ್ದೇಶನ

**ಬೆಳಗಾವಿ ವಾರ್ತೆ ಬಳ್ಳಾರಿ:** ಮುಂಗಾರು ಅವಧಿಯಲ್ಲಿ ಎದುರಾಗಬಹುದಾದ ಪ್ರವಾಹ ಪರಿಸ್ಥಿತಿ ಮತ್ತು ಭಾರೀ ಮಳೆಯಿಂದ ಉಂಟಾಗುವ ಹಾನಿಗಳನ್ನು ತಡೆಗಟ್ಟಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಕಟ್ಟುನಿಟ್ಟಿನ ಆದೇಶ ನೀಡಿದರು.




ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮುಂಗಾರು ಪೂರ್ವಸಿದ್ಧತೆ ಹಾಗೂ ಕುಡಿಯುವ ನೀರು ಪೂರೈಕೆ ಕುರಿತು ಬುಧವಾರ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮುಂಬರುವ ಮುಂಗಾರು ಮಳೆ ಎದುರಿಸಲು ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವರದಿ ಅನ್ವಯ, ಮುಂದಿನ ಒಂದು ವಾರಗಳ ಕಾಲ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದು ಮುನ್ಸೂಚನೆ ಇದ್ದು, ಭಾರೀ ಮಳೆ ಅಥವಾ ಪ್ರವಾಹ ಪರಿಸ್ಥಿತಿಯನ್ನು ಎದುರಿಸಲು ಜಿಲ್ಲಾಡಳಿತವು ಸಂಪೂರ್ಣ ಸನ್ನದ್ಧವಾಗಿದೆ ಎಂದರು.

ಮುಂಗಾರು ಪ್ರವೇಶವಾಗಿದ್ದು, ಜಿಲ್ಲೆಯ ಎಲ್ಲಾ ಪ್ರಮುಖ ಚರಂಡಿಗಳು, ನಾಲಾಗಳು ಮತ್ತು ನೀರು ಹರಿಯುವ ಮಾರ್ಗಗಳ ಹೂಳು ತೆಗೆದು ನೀರು ಸರಾಗವಾಗಿ ಹರಿಯುವಂತೆ ಮಾಡಲು ಸ್ಥಳೀಯ ಸಂಸ್ಥೆಗಳು ಹಾಗೂ ನೀರಾವರಿ ಇಲಾಖೆ ಮುಂದಾಗಬೇಕು. ಕಲ್ವರ್ಟ್‌ಗಳಲ್ಲಿನ ಬ್ಲಾಕೇಜ್‌ಗಳನ್ನು ತೆರವುಗೊಳಿಸಲು ಮತ್ತು ಹಾನಿಗೊಳಗಾದ ಚರಂಡಿ ಸ್ಲ್ಯಾಬ್‌ಗಳನ್ನು ತಕ್ಷಣ ಬದಲಾಯಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾ ಮಟ್ಟದಲ್ಲಿ 24*7 ಕಾರ್ಯನಿರ್ವಹಿಸುವ 'ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ' ಹಾಗೂ ನಿಯಂತ್ರಣ ಕೊಠಡಿಗಳನ್ನು ಸಕ್ರಿಯವಾಗಿದೆ. ಮಳೆಯ ತೀವ್ರತೆಯ ಆಧಾರದ ಮೇಲೆ ಹೈ, ಮೀಡಿಯಂ ಮತ್ತು ಲೋ ರಿಸ್ಕ್ ಪ್ರದೇಶಗಳನ್ನು ಗುರುತಿಸಿ ತಕ್ಷಣವೇ ಮುನ್ಸೂಚನೆ ರವಾನಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಪ್ರವಾಹ ಪೀಡಿತ ಸೂಕ್ಷ ?? ಪ್ರದೇಶಗಳಲ್ಲಿ ಲೈಫ್ ಗಾರ್ಡ್ಸ್, ಬೋಟ್‌ಗಳು, ಲೈಫ್ ಜಾಕೆಟ್‌ಗಳು ಮತ್ತು ಸುರಕ್ಷತಾ ರೋಪ್‌ಗಳನ್ನೊಳಗೊಂಡ ರಕ್ಷಣಾ ತಂಡಗಳನ್ನು ಸನ್ನದ್ಧ ಸ್ಥಿತಿಯಲ್ಲಿ ಇರಿಸಲು ಅಗ್ನಿಶಾಮಕ, ಪೊಲೀಸ್ ಮತ್ತು ಹೋಂಗಾರ್ಡ್ ಇಲಾಖೆಗಳಿಗೆ ಜವಾಬ್ದಾರಿ ವಹಿಸಿದರು.

ಮಳೆಗೆ ಕುಸಿಯಬಹುದಾದ ಹಳೆಯ ಹಾಗೂ ಅಪಾಯಕಾರಿ ಮನೆಗಳನ್ನು ತಾಲೂಕುವಾರು ಗುರುತಿಸಿ, ಅಲ್ಲಿ ವಾಸಿಸುವ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಸೂಚಿಸಬೇಕು. ನದಿ ಪಾತ್ರದ ಅನಧಿಕೃತ ಒತ್ತುವರಿಗಳನ್ನು ತೆರವುಗೊಳಿಸಬೇಕು. ಅದರಂತೆ ಶಿಥಿಲಗೊಂಡ ಹಳೆಯ ಕಟ್ಟಡಗಳ ಶಾಲೆಗಳ ಗೋಡೆ, ಅಂಗನವಾಡಿ ಕೇಂದ್ರಗಳಿದ್ದಲ್ಲಿ ಅಂತಹವುಗಳನ್ನು ಗುರುತಿಸಿ ಕೂಡಲೇ ಸ್ಥಳಾಂತರಿಸಲು ಮುಂದಾಗಬೇಕು ಎಂದರು.

ಪ್ರವಾಹ ಅಥವಾ ತುರ್ತು ಸಂದರ್ಭಗಳಲ್ಲಿ ತಕ್ಷಣವೇ ಕುಡಿಯುವ ನೀರು ಒದಗಿಸಲು ಟ್ಯಾಂಕರ್‌ಗಳನ್ನು ಸಿದ್ಧವಾಗಿಟ್ಟುಕೊಳ್ಳಲು ಹಾಗೂ ಜಿಲ್ಲೆಯ ಎಲ್ಲಾ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸುಸ್ಥಿತಿಯಲ್ಲಿ ನಿರ್ವಹಿಸಲು ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನಗರಾಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಏಪ್ರಿಲ್ 1 ರಿಂದ ಮೇ 31 ರವರೆಗಿನ ಮುಂಗಾರು ಪೂರ್ವ ಅವಧಿಯಲ್ಲಿ ಸಂಭವಿಸಿದ ಮಳೆ, ಬಿರುಗಾಳಿ ಹಾಗೂ ಸಿಡಿಲಿನಿಂದ ಉಂಟಾದ ಹಾನಿಗಳ ವಿವರಗಳನ್ನು ಸಭೆಯಲ್ಲಿ ಪರಿಶೀಲಿಸಿದ ಜಿಲ್ಲಾಧಿಕಾರಿಯವರು, ಮನೆ ಹಾನಿ, ಜೀವಹಾನಿ ಹಾಗೂ ಜಾನುವಾರು ಹಾನಿಗೆ ಸಂಬಂಧಿಸಿದಂತೆ ಕೂಡಲೇ ಪರಿಹಾರ ತಲುಪಿಸಬೇಕು ಎಂದರು.

ತಾಲೂಕು ಕಚೇರಿಗಳ ತಂಡಗಳಿಂದ ಹಾನಿಗೊಳಗಾದ ಮನೆಗಳ ಜಂಟಿ ಸಮೀಕ್ಷೆ ನಡೆಸಿ, ಪೂರ್ಣ, ತೀವ್ರ ಹಾಗೂ ಭಾಗಶಃ ಹಾನಿಗೊಳಗಾದ ಮನೆಗಳನ್ನು ಪರಿಶೀಲಿಸಿ ಬಾಕಿ ಇರುವ ಪರಿಹಾರ ಹಣವನ್ನು ಶೀಘ್ರವೇ ಬಿಡುಗಡೆ ಮಾಡಬೇಕು. ಬಿರುಗಾಳಿ–ಮಳೆಗೆ ಹಾನಿಗೊಳಗಾದ ವಿದ್ಯುತ್ ಕಂಬಗಳು ಹಾಗೂ ಟ್ರಾನ್ಸ್‌ಫಾರ್ಮರ್‌ಗಳನ್ನು ತಕ್ಷಣವೇ ದುರಸ್ತಿಗೊಳಿಸಲು ಮತ್ತು ಯಾವುದೇ ವಿಪತ್ತಿನ ಸಂದರ್ಭದಲ್ಲಿ 6 ರಿಂದ 12 ಗಂಟೆಗಳ ಒಳಗಾಗಿ ವಿದ್ಯುತ್ ಸಂಪರ್ಕವನ್ನು ಮರುಸ್ಥಾಪಿಸಬೇಕು. ವಿದ್ಯುತ್ ಸಂಪರ್ಕಕ್ಕೆ ಅಡ್ಡಿಯಾಗುವ ಹಳೆಯ ಮರ– ಕೊಂಬೆಗಳನ್ನು ಕೂಡಲೇ ತೆರವುಗೊಳಿಸಬೇಕು ಎಂದು ಜೆಸ್ಕಾಮ್, ಅರಣ್ಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲೆಯ ರೈತರಿಗೆ ಸಕಾಲದಲ್ಲಿ ರಸಗೊಬ್ಬರ (ಯೂರಿಯಾ ಇತ್ಯಾದಿ) ಹಾಗೂ ಗುಣಮಟ್ಟದ ಬಿತ್ತನೆ ಬೀಜಗಳನ್ನು ದಾಸ್ತಾನು ಮಾಡಿಕೊಂಡು ಯಾವುದೇ ಕೊರತೆಯಾಗದಂತೆ ವಿತರಿಸಬೇಕು ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು. ನಿರಂತರ ಮಳೆಯಿಂದಾಗಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇದ್ದು, ನಿಯಮಿತವಾಗಿ ಫಾಂಗಿಂಗ್ ಕಾರ್ಯ ಕೈಗೊಳ್ಳಬೇಕು ಎಂದರು.

ಯಾವುದೇ ಇಲಾಖೆಯ ಅಧಿಕಾರಿಗಳು ಕೇಂದ್ರ ಸ್ಥಾನ ಬಿಟ್ಟು ಹೋಗಬಾರದು. ನಿರ್ಲಕ್ಷ ?? ವಹಿಸುವ ಅಧಿಕಾರಿಗಳ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆಯಡಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ ಅವರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಹಶೀಲ್ದಾರರು ಸತತ ಸಂಪರ್ಕದಲ್ಲಿದ್ದು, ಸಾರ್ವಜನಿಕರ ದೂರುಗಳಿಗೆ ತಕ್ಷಣ ಸ್ಪಂದಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ವಿಡಿಯೋ ಸಂವಾದದ ಮೂಲಕ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್. ಮಂಜುನಾಥ, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿಡಿಯೋ ಸಂವಾದದ ಮೂಲಕ ಎಲ್ಲಾ ತಾಲ್ಲೂಕು ತಹಶೀಲ್ದಾರರು, ನಗರ ಸ್ಥಳೀಯ–ಸಂಸ್ಥೆಗಳ ಮುಖ್ಯಾಧಿಕಾರಿಗಳು ಭಾಗವಹಿಸಿದ್ದರು.

# ಸಂಗೀತದಿಂದ ಭಾರತದ ಸಂಸ್ಕೃತಿಯ ದರ್ಶನ: ಕುಲಪತಿ ಪ್ರೊ.ಎ.ಎಂ.ಖಾನ್




**ಬೆಳಗಾವಿ ವಾರ್ತೆ ಧಾರವಾಡ:** ಸಂಗೀತ ಸಮ್ಮೇಳನ ಕಾರ್ಯಕ್ರಮಗಳು ಭಾರತದ ನೈಜ ಸಂಸ್ಕೃತಿಯ ದರ್ಶನವನ್ನು ಮಾಡಿಸುತ್ತವೆ ಎಂದು ಪ್ರಸ್ತುತ ಉದ್ಘಾಟನೆಗೊಂಡ ನಾದಲಹರಿ ಸಂಸ್ಥೆಯು ಯುವಜನತೆಗೆ ಸಹಕಾರಿಯಾಗಬೇಕು. ವಿದ್ಯಾರ್ಥಿಗಳು ಸಂಗೀತ ಕ್ಷೇತ್ರದ ಹಿರಿಯ ಕಲಾವಿದರ ಜೊತೆಗೆ ಒಡನಾಟ ಇಟ್ಟುಕೊಂಡು ಅಧ್ಯಯನ ಮಾಡಬೇಕು ಎಂದು ಕವಿವಿ ಕುಲಪತಿ ಪ್ರೊ. ಎ. ಎಂ. ಖಾನ್, ಹೇಳಿದರು.

ಕರ್ನಾಟಕ ವಿಶ್ವವಿದ್ಯಾಲಯದ ಸ್ನಾತಕೋತ್ತರ ಸಂಗೀತ ಅಧ್ಯಯನ ವಿಭಾಗ ಹಾಗೂ ಪದ್ಮಶ್ರೀ ಗಂಗೂಬಾಯಿ ಹಾನಗಲ್ ಪೀಠ, ನಾದಲಹರಿ ಸಂಗೀತ ಸಾಂಸ್ಕೃತಿಕ (ರಿ) ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ಬುಧವಾರ ವಿಶ್ವವಿದ್ಯಾಲಯದ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ನಡೆದ ಸಂಗೀತ ಸಮ್ಮೇಳನ ಹಾಗೂ ನಾದಲಹರಿ ಸಂಗೀತ, ಸಾಂಸ್ಕೃತಿಕ (ರಿ) ಟ್ರಸ್ಟ್ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಯಾಗಿದ್ದ ಖ್ಯಾತ ಸಂಗೀತ ಕಲಾವಿದ ಪದ್ಮಶ್ರೀ ಪಂ. ವೆಂಕಟೇಶಕುಮಾರ 'ಕಲಾವಿದರಾಗಬೇಕೆನ್ನುವವರು ನಿತ್ಯ ನಿರಂತರ ಶ್ರದ್ದೆಯಿಂದ ಸಂಗೀತ ಕಲಿಯಬೇಕು ಅಂದಾಗ ಅದು ಒಲಿಯುವತ್ತದೆ. ಪ್ರತಿದಿನವೂ ಅಭ್ಯಾಸ ಮಾಡುವುದು ಅನಿವಾರ್ಯ ಎಂದರು. ಉತ್ತಮ ಕೇಳುಗರಿಗೂ ಕೂಡ ಪ್ರಶಸ್ತಿ ಕೊಡುವುದನ್ನು ಆರಂಭಿಸಬೇಕು, ಸಂಗೀತದ ಮಾಧುರ್ಯವನ್ನು ಸವಿಯುವುದರ ಜೊತೆಗೆ ಅದರ ಆಧ್ಯಾತ್ಮಿಕ ಭಾವವನ್ನೂ ಅರಿಯಬೇಕು, ಸಂಗೀತದ ಪರಂಪರೆಯನ್ನು ಬೆಳೆಸುವಲ್ಲಿ ಸಂಘಟಿತ ಪ್ರಯತ್ನ ಅಗತ್ಯ 'ನಾದಲಹರಿ' ಸಂಗೀತ ಕ್ಷೇತ್ರಕ್ಕೆ ಕೊಡುಗೆ ನೀಡಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಮನ್ಸೂರಿನ ಶ್ರೀ ರೇವಣಸಿದ್ಧೇಶ್ವರ ಮಠದ ಜಗದ್ಗುರು ಪರಮ ಪೂಜ್ಯ ಶ್ರೀ ಬಸವರಾಜದೇವರು ಸ್ವಾಮೀಜಿ ಮಾತನಾಡಿ, ಸಂಗೀತವು ಎಲ್ಲದಕ್ಕೂ ಔಷಧವಾಗಿ ತನ್ನ ಪ್ರಭಾವ ಬೀರಿದ್ದು, ಯುವಜನತೆಯು ಸಂಗೀತದ ಅಭ್ಯಾಸದ ಕಡೆಗೆ ಗಮನ ಹರಿಸಬೇಕು. ನಾದಲಹರಿ ಸಂಸ್ಥೆಯು ನಾಡಿಗೆ ಸಂಗೀತದ ಪ್ರೇರಣೆಯಾಗಿ ಬೆಳೆಯಲಿ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕರ್ನಾಟಕ ವಿಶ್ವವಿದ್ಯಾಲಯದ ಕುಲಸಚಿವ (ಪ್ರಭಾರ) ಪ್ರೊ. ಮೃತ್ಯುಂಜಯ ಅಗಡಿ ಮಾತನಾಡಿ, ಸಾಹಿತ್ಯ ಮತ್ತು ಸಂಗೀತ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಸಂಗೀತಗಾರರು ಪ್ರತಿನಿತ್ಯ ಸಂಗೀತಾಭ್ಯಾಸದಲ್ಲಿ ತೊಡಗುವುದರಿಂದ ಸಮರ್ಥ ಕಲಾವಿದರಾಗಲು ಸಾಧ್ಯ. ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ದೃಢಸಂಕಲ್ಪದಿಂದ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಪುಣೆಯ ಖ್ಯಾತ ಕಲಾವಿದ ಪಂ. ಸುಧಾಕರ ಚೌಹಾಣ್ ಅವರು ರಾಗ ಪಟದೀಪ ಅನ್ನು ಪ್ರಸ್ತುತಪಡಿಸಿದರು. ನಂತರ ಹಿರಿಯ ಕಲಾವಿದ ಪಂ ಸೋಮನಾಥ ಮರಡೂರ ಅವರು ಜೋಗಕಂಸ ರಾಗವನ್ನು ಪ್ರಸ್ತುತಪಡಿಸಿದರು. ನಂತರ ಸುಗಮ ಸಂಗೀತ ಗಾಯನ ನಡೆಯಿತು.

ಡಾ. ವಿ. ಎಲ್. ಪಾಟೀಲ ಸ್ವಾಗತಿಸಿದರು, ಡಾ. ಮಹೇಂದ್ರ ಹರಿಹರ ವಂದಿಸಿದರು, ಸಂಗೀತ ವಿಭಾಗದ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಡಾ. ಭಾರತಿ ಗಾಣಿಗೇರ ನಿರೂಪಿಸಿದರು.

ಅಡಿಬರಹ: ಕವಿವಿ ಸ್ನಾತಕೋತ್ತರ ಸಂಗೀತ ಅಧ್ಯಯನ ವಿಭಾಗದ ಆಶ್ರಯದಲ್ಲಿ ನಾದಲಹರಿ ಸಂಗೀತ ಹಾಗೂ ಸಾಂಸ್ಕೃತಿ ಟ್ರಸ್ಟ್, ಹಾಗೂ ಸಮ್ಮೇಳನವನ್ನು ಕುಲಪತಿ ಪ್ರೊ.ಎ.ಎಂ.ಖಾನ್ ಉದ್ಘಾಟಿಸಿದರು. ಪ್ರೊ. ಮೃತ್ಯುಂಜಯ ಅಗಡಿ, ಶ್ರೀ ಬಸವರಾಜದೇವರು ಸ್ವಾಮಿಗಳು, ಪಂ. ವೆಂಕಟೇಶಕುಮಾರ ಇತರರು ಚಿತ್ರದಲ್ಲಿದ್ದಾರೆ.

# ಗೆಳೆಯರ ಬಳಗದಿಂದ ವಿಶೇಷ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಸರ್ವಧರ್ಮ ಸಮಾಜ ಸೇವಕ ಡಾ. ರಮೇಶ್ ಅವರ ಜನ್ಮದಿನದ ಅಂಗವಾಗಿ ಅವರ ಗೆಳೆಯರ ಬಳಗವು ನಗರದ ವಿವಿಧ ಭಾಗಗಳಲ್ಲಿ ಹಲವು ಸಮಾಜಮುಖಿ ಹಾಗೂ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಿತು.

ಕಾರ್ಯಕ್ರಮದ ಅಂಗವಾಗಿ ಮುಂಜಾನೆ ವೆಂಕಟೇಶ ಕಾಲೋನಿಯ ಬನ್ನಿ ಮಹಾಕಾಳಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಬಳಿಕ ಪರಿಸರ ಸಂರಕ್ಷಣೆಯ ಸಂದೇಶ ಸಾರುವ ಉದ್ದೇಶದಿಂದ ಸಸಿ ನೆಡುವ ವನಮಹೋತ್ಸವ ಕಾರ್ಯಕ್ರಮ ನಡೆಸಲಾಯಿತು.

ನಂತರ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಚಿಟಗುಪ್ಪಿ ಆಸ್ಪತ್ರೆಯಲ್ಲಿನ ಬಡ ರೋಗಿಗಳಿಗೆ ಹಣ್ಣು ಹಂಪಲವನ್ನು ವಿತರಣೆ ಮಾಡಲಾಯಿತು.

ಪ್ರೇಮ ಬಿಂದು ರಕ್ತನಿಧಿ ಕೇಂದ್ರದಲ್ಲಿ ರಕ್ತದಾನ ಶಿಬಿರ ಆಯೋಜಿಸಿದ್ದು ನಲವತ್ತಕ್ಕೂ ಹೆಚ್ಚು ಯುವಕರು ರಕ್ತದಾನ ಮಾಡಿದರು. ಈ ಸಂದರ್ಭದಲ್ಲಿ ಡಾ.ರಮೇಶ್ ಅವರು ರಕ್ತದಾನ ಮಾಡಿದ ಯುವಕರಿಗೆ ಸನ್ಮಾನ ಮಾಡಿ ಗೌರವಿಸಿದರು.

ಬಳಿಕ ಸಂಗೊಳ್ಳಿ ರಾಯಣ್ಣ ವೃತ್ತ (ಜನತಾ ಬಜಾರ್) ಪ್ರದೇಶದಲ್ಲಿನ ಬೀದಿಬದಿ ವ್ಯಾಪಾರಿಗಳಿಗೆ ಛತ್ರಿಗಳನ್ನು ವಿತರಿಸುವ ಮೂಲಕ ನೆರವು ನೀಡಲಾಯಿತು. ಶ್ರೀ ಸಿದ್ಧಾರೂಢ ಮಠ ಹಾಗೂ ಹಜರತ್ ಸೈಯದ್ ಫತೇಹ್ ಶಾ ದರ್ಗಾ ಸುತ್ತಮುತ್ತಲಿನ ಬಡಜನರಿಗೆ ಅಗತ್ಯ ವಸ್ತುಗಳನ್ನು ವಿತರಿಸಲಾಯಿತು.

ಸರ್ಕಾರಿ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಪುಸ್ತಕ ಹಾಗೂ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಣೆ, ಮತ್ತು ರೈಲ್ವೆ ನಿಲ್ದಾಣ ಮತ್ತು ಬಸ್ ನಿಲ್ದಾಣ ಪ್ರದೇಶದಲ್ಲಿರುವ ನಿರ್ಗತಿಕರಿಗೆ ಬೆಡ್‌ಶೀಟ್‌ಗಳನ್ನು ವಿತರಿಸಲಾಯಿತು.

ಇಂದಿರಾ ಗಾಜಿನ ಮನೆಯಲ್ಲಿ ಪೌರಕಾರ್ಮಿಕರನ್ನು ಸನ್ಮಾನಿಸಿ ಉಡುಗೊರೆಗಳನ್ನು ನೀಡಲಾಯಿತು. ಉಣಕಲ್‌ನ ಮಂದಬುದ್ಧಿ ಮಕ್ಕಳ ಶಾಲೆ ಹಾಗೂ ಅನಾಥಾಶ್ರಮದಲ್ಲಿ ಆಹಾರ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಇದೇ ವೇಳೆ ಕೇಶ್ವಾಪುರದಲ್ಲಿರುವ ಮಿಷನರೀಸ್ ಆಫ್ ಚಾರಿಟಿ ಸಂಸ್ಥೆಗೆ ಭೇಟಿ ನೀಡಿ, ಅಲ್ಲಿನ ನಿವಾಸಿಗಳಿಗೆ ಅಗತ್ಯ ವಸ್ತುಗಳನ್ನು ವಿತರಿಸಲಾಯಿತು. ವೃದ್ಧಾಶ್ರಮದ ಹಿರಿಯ ನಾಗರಿಕರಿಗೂ ಹಣ್ಣು ಹಂಪಲು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಧರ್ಮಪತ್ನಿ ಗೀತಾ ರಮೇಶ್ ಮಹಾದೇವಪ್ಪನವರ, ಮುಖಂಡರಾದ ಅಶೋಕ ವಾಲ್ಮೀಕಿ, ರಾಜು ಕಾಳೆ, ಕಾಶೀಂ ಕೂಡಲಗಿ, ರಾಜೇಶ್ ಮಹಾದೇವಪ್ಪನವರ, ಶಾನು ಕಾನ್, ಮಹ್ಮದ್ ನದಾಫ್, ಮಂಜು ಉಪ್ಪಾರ, ಕಲ್ಲಪ್ಪ ಬರಮಗೌಡ್ರ, ವೆಂಕಟೇಶ, ಶಕೀಲ್ ವಲಿ ಅಹ್ಮದ್, ರವಿಚಂದ್ರ ದೊಡ್ಡಿಹಾಳ, ಆನಂದ ಕಾಳೆ, ಬಸವರಾಜ ಮ್ಯಾಗೇಡಿ, ಕೆಂಚಪ್ಪ ನಡುವಿನಮನಿ, ಶ್ರೀನಿವಾಸ ವಾಲಿಕಾರ, ಶಿವಾನಂದ ಚಿಚಡಿ ಸೇರಿದಂತೆ ಇತರರು ಭಾಗಿಯಾಗಿದ್ದರು.

# ಜೂನ್ 5 ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿ ನೆಡುವ ಸ್ಥಳ ಪರಿಶೀಲನೆ



**ಬೆಳಗಾವಿ ವಾರ್ತೆ ಧಾರವಾಡ:** ಜೂನ್ 5 ರಂದು ನಡೆಯಲಿರುವ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಧಾರವಾಡ ಗಾಂದೀನಗರದ ಸ್ಕೂಲ್ ನಂಬರ್ 5 ರಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕಾಗಿ ಆಯ್ಕೆ ಮಾಡಲಾದ ಸ್ಥಳವನ್ನು ಶ್ರೀ ಅಡಿವೇಶ ಇಟಗಿ ಅಧ್ಯಕ್ಷರು ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ ಅವರು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಶಾಲಾ ಆವರಣದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಗಿಡಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಗೆ ಉತ್ತೇಜನ ನೀಡುವ ಕುರಿತು ಚರ್ಚೆ ನಡೆಸಲಾಯಿತು. ಪರಿಸರದ ಸಮತೋಲನ ಕಾಪಾಡಲು ಹಾಗೂ ಮುಂದಿನ ಪೀಳಿಗೆಗೆ ಹಸಿರು ವಾತಾವರಣ ನಿರ್ಮಿಸಲು ಪ್ರತಿಯೊಬ್ಬರೂ ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಜವಾಬ್ದಾರಿ ವಹಿಸಬೇಕು ಎಂದು ಅಡಿವೇಶ ಇಟಗಿ ಅವರು ಕರೆ ನೀಡಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸಾರ್ವಜನಿಕರ ಸಹಭಾಗಿತ್ವದಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದೆಂದು, ಹಾಗೂ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮಾನ್ಯ ಅಧ್ಯಕ್ಷರು ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ ಇವರು ತಿಳಿಸಿರುತ್ತಾರೆ.

# ವಿಶ್ವ ಬಾಲಕಾರ್ಮಿಕರ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಅರ್ಥಪೂರ್ಣವಾಗಿರಲಿ : ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ



**ಬೆಳಗಾವಿ ವಾರ್ತೆ ಗದಗ:** ವಿಶ್ವ ಬಾಲಕಾರ್ಮಿಕರ ವಿರೋಧಿ ದಿನಾಚರಣೆಯ ಜೂನ್ 12 ರಂದು ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ವಿಶ್ವ ಬಾಲಕಾರ್ಮಿಕರ ಪದ್ಧತಿ ವಿರೋಧಿ ದಿನಾಚರಣೆಯ ನಿಮಿತ್ತ ಜರುಗಿದ ಪೂರ್ವಭಾವಿ ಸಭೆ ಮತ್ತು ಜಿಲ್ಲಾ ಮಟ್ಟದ ಟಾಸ್ಕಫೋರ್ಸ ಕಮಿಟಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಶಿಷ್ಟಾಚಾರದನ್ವಯ ಆಮಂತ್ರಣ ಮುದ್ರಣಕ್ಕೆ ಕ್ರಮ ವಹಿಸಬೇಕು. ಗ್ರಾಮ ಪಂಚಾಯತಿ, ಪುರಸಭೆ ನಗರಸಭೆಯಲ್ಲಿ ಡಂಗುರ ಸಾರಿಸಿ ಜನಗಳಿಗೆ ಜಾತಾ ಕಾರ್ಯಕ್ರಮದ ಬಗ್ಗೆ ಅರಿವು ಮೂಡಿಸಬೇಕು ಎಂದರು.

ತಾವು ಕೆಲಸ ಮಾಡುವ ಸರ್ಕಾರಿ ಕಚೇರಿಗಳಲ್ಲಿ ವಿಶ್ವ ಬಾಲ ಕಾರ್ಮಿಕರ ಪದ್ಧತಿ ವಿರೋಧಿ ದಿನ ಕುರಿತು ಪ್ರಮಾಣ ವಚನ ಸ್ವೀಕಾರ ಮಾಡಬೇಕು. ಶಾಲಾ ಕಾಲೇಜುಗಳಲ್ಲಿ ಜಾತಾ ಕಾರ್ಯಕ್ರಮ ಏರ್ಪಡಿಸಬೇಕು. ಪ್ರಬಂಧ ಸ್ಪರ್ಧೆ, ಚಿತ್ರಕಲೆ, ಭಾಷಣ ಏರ್ಪಡಿಸಿ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತ 9 ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಜರುಗುವುದು.

ಜಿಲ್ಲೆಯಾದ್ಯಂತ ಜೂನ್ 13 ರಿಂದ ಜೂನ್ 30 ರವರೆಗೆ ಬಾಲ ಹಾಗೂ ಕಿಶೋರ ಕಾರ್ಮಿಕರ ರಕ್ಷಣಾ ಅಭಿಯಾನ ಕಾರ್ಯಕ್ರಮವನ್ನು ಆಯೋಜಿಸುವುದು. ಬಾಲ ಕಾರ್ಮಿಕರ ಪದ್ಧತಿ ವಿರೋಧಿ ದಿನಾಚರಣೆ ಕುರಿತು ಉಪನ್ಯಾಸ ಕಾರ್ಯಕ್ರಮವು ಜರುಗುವುದು. ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ವಿರೋಧಿ ಸಂದೇಶ ಸಾರುವ ಧ್ವನಿ ಮುದ್ರಿಕೆಯನ್ನ ಜಿಲ್ಲೆಯಾದ್ಯಂತ ಹೊರಡಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಒಟ್ಟಾರೆಯಾಗಿ ವಿಶ್ವ ಬಾಲಕಾರ್ಮಿಕರ ಪದ್ಧತಿ ವಿರೋಧಿ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ನಿರ್ದೇಶನ ನೀಡಿದರು.

ವೇದಿಕೆ ವ್ಯವಸ್ಥೆ, ವೇದಿಕೆ ಅಲಂಕಾರ, ಸ್ಪರ್ಧೆಗಳ ಆಯೋಜನೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಆರ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಡಿ.ವೈ.ಎಸ್.ಪಿ ಮುರ್ತುಜಾ ಖಾದ್ರಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ.ಎಸ್.ಸೋಮನಕಟ್ಟಿ, ಶಾಲಾ ಶಿಕ್ಷಣಾ ಇಲಾಖೆಯ ಉಪನಿರ್ದೇಶಕ ಆರ್.ಎಸ್ ಬುರಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧ ಮಣ್ಣೂರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಜಯಶ್ರೀ ತೊಟಗೇರ, ನಗರಾಭಿವೃದ್ಧಿ ಯೋಜನೆ ನಿರ್ದೇಶಕ ಬಸವರಾಜ ಕೊಟೂರು, ಬಾಲ ಕಾರ್ಮಿಕ ಇಲಾಖೆಯ ಯೋಜನೆ ನಿರ್ದೇಶಕ ಸಂದೇಶ ಪಾಟೀಲ್, ಗದಗ ಬೆಟಗೇರಿ ನಗರಸಭೆ ಪೌರಯುಕ್ತ ರಾಜಾರಾವ್ ಪವಾರ, ಸ್ಪಂದನ ಸಂಸ್ಥೆಯ ಎನ್.ಜಿ.ಓ ಅಶ್ವಿನಿ ಹಿರೇಮಠ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ವಿಶ್ವ ಪರಿಸರ ದಿನಾಚರಣೆ: ಪರಿಶೀಲನೆ



**ಬೆಳಗಾವಿ ವಾರ್ತೆ ಧಾರವಾಡ:** ಜೂನ್ 5 ರಂದು ನಡೆಯಲಿರುವ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಧಾರವಾಡ ಗಾಂದೀನಗರದ ಸ್ಕೂಲ್ ನಂಬರ್ 5 ರಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕಾಗಿ ಆಯ್ಕೆ ಮಾಡಲಾದ ಸ್ಥಳವನ್ನು ಅಧ್ಯಕ್ಷರು ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ ಅವರು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಶಾಲಾ ಆವರಣದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಗಿಡಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಗೆ ಉತ್ತೇಜನ ನೀಡುವ ಕುರಿತು ಚರ್ಚೆ ನಡೆಸಲಾಯಿತು. ಪರಿಸರದ ಸಮತೋಲನ ಕಾಪಾಡಲು ಹಾಗೂ ಮುಂದಿನ ಪೀಳಿಗೆಗೆ ಹಸಿರು ವಾತಾವರಣ ನಿರ್ಮಿಸಲು ಪ್ರತಿಯೊಬ್ಬರೂ ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಜವಾಬ್ದಾರಿ ವಹಿಸಬೇಕು ಎಂದು ಅಡಿವೇಶ ಇಟಗಿ ಅವರು ಕರೆ ನೀಡಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸಾರ್ವಜನಿಕರ ಸಹಭಾಗಿತ್ವದಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದೆಂದು, ಹಾಗೂ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮಾನ್ಯ ಅಧ್ಯಕ್ಷರು ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ ಇವರು ತಿಳಿಸಿರುತ್ತಾರೆ.

# ಮಳೆಗಾಲದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಿ: ಚಂದ್ರಶೇಖರ ಬಿ ಕಂದಕೂರ



**ಬೆಳಗಾವಿ ವಾರ್ತೆ ಹೊಳೆ ಆಲೂರು :-** ಮಳೆಗಾಲದ ಸಂದರ್ಭದಲ್ಲಿ ಗ್ರಾಮದಲ್ಲಿ ಸ್ವಚ್ಛತೆ ಮತ್ತು ಸಾರ್ವಜನಿಕ ಆರೋಗ್ಯ ರಕ್ಷಣೆ ಅತ್ಯಂತ ಮಹತ್ವದ್ದಾಗಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ವಚ್ಛತಾ ಕಾರ್ಯಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಕೈಗೊಳ್ಳಬೇಕು ಎಂದು ರೋಣ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಹೊಳೆ ಆಲೂರು ಗ್ರಾಮ ಪಂಚಾಯತಿ ಆಡಳಿತ ಅಧಿಕಾ ರಿಗಳಾದ ಚಂದ್ರಶೇಖರ ಬಿ. ಕಂದಕೂರ ಹೇಳಿದರು. ಹೊಳೆ ಆಲೂರ ಗ್ರಾಮ ಪಂಚಾಯತಿ ಕಚೇರಿಯಲ್ಲಿ ಆಯೋಜಿಸಿದ್ದ ಸಾಮಾನ್ಯ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಮಳೆಗಾಲದಲ್ಲಿ ಚರಂಡಿಗಳಲ್ಲಿ ನೀರು ನಿಲ್ಲುವುದು, ಕಸ ಸಂಗ್ರಹವಾ ಗುವುದು ಹಾಗೂ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಗ್ರಾಮಗಳಲ್ಲಿ ನಿರಂತರ ಸ್ವಚ್ಛತಾ ಕಾರ್ಯ ಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ ಎಂದು ತಿಳಿಸಿದರು. ಗ್ರಾಮದ ಮುಖ್ಯ ರಸ್ತೆ, ಬೀದಿಗಳು, ಚರಂಡಿಗಳು, ಸಾರ್ವಜನಿಕ ಸ್ಥಳಗಳು ಹಾಗೂ ಕುಡಿಯುವ ನೀರಿನ ಮೂಲಗಳ ಸುತ್ತ ಮುತ್ತ ಸ್ವಚ್ಛತೆ ಕಾಪಾಡುವ ಮೂಲಕ ಡೆಂಗ್ಯೂ, ಮಲೇರಿಯಾ ಸೇರಿದಂತೆ ಸಾಂಕ್ರಾಮಿಕ ರೋಗಗಳ ಹರಡು ವಿಕೆಯನ್ನು ತಡೆಯಬಹುದು ಎಂದು ಹೇಳಿದರು. ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಗೂ ಸ್ವಚ್ಛತಾಗಾರರು ತಮ್ಮ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸುವ ಮೂಲಕ ಸ್ವಚ್ಛ ಮತ್ತು ಆರೋಗ್ಯಕರ ಗ್ರಾಮ ನಿರ್ಮಾಣಕ್ಕೆ ಸಹಕರಿಸಬೇಕು ಹೇಳಿದರು. ಸ್ವಚ್ಛತಾಗಾರರ ಸುರಕ್ಷತೆಗೂ ಹೆಚ್ಚಿನ ಒತ್ತು ನೀಡಿದ ಅವರು, ಸ್ವಚ್ಛತಾ ಕಾರ್ಯ ಗಳಲ್ಲಿ ತೊಡಗುವ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ಗ್ಲೌಸ್, ಬೂಟು, ಮಾಸ್ಕ್, ಸುರಕ್ಷತಾ ಜಾಕೆಟ್ ಸೇರಿದಂತೆ ಅಗತ್ಯ ಸುರಕ್ಷತಾ ಪರಿಕರಗಳನ್ನು ಧರಿಸಿ ಕರ್ತವ್ಯ ನಿರ್ವಹಿಸಬೇಕು ಎಂದು ಸೂಚಿಸಿದರು. ಸುರಕ್ಷತಾ ಕ್ರಮಗಳನ್ನು ಪಾಲಿಸುವುದ ರಿಂದ ಸೋಂಕು ಹಾಗೂ ಅಪಘಾತ ಗಳಿಂದ ರಕ್ಷಣೆ ಪಡೆಯಲು ಸಾಧ್ಯವಾಗು ತ್ತದೆ ಎಂದು ತಿಳಿಸಿದರು. ಸಭೆಯಲ್ಲಿ ಗ್ರಾಮ ಪಂಚಾಯತಿಯ ಅಭಿವೃದ್ಧಿ ಕಾರ್ಯಗಳು, ಸ್ವಚ್ಛ ಭಾರತ ಮಿಷನ್ ಯೋಜನೆಯ ಅನುಷ್ಠಾನ, ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ, ಕಸ ವಿಂಗಡಣೆ, ಚರಂಡಿಗಳ ನಿರ್ವಹಣೆ ಹಾಗೂ ಸಾರ್ವಜನಿಕ ಆರೋಗ್ಯಕ್ಕೆ ಸಂ ಬಂಧಿಸಿ ದ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಿತು. ಈ ಸಂದರ್ಭ ದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅವರು ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಗೂ ಸ್ವಚ್ಛತಾಗಾರರಿಗೆ ಅಗತ್ಯ ಸಲಹೆ–ಸೂಚನೆಗಳನ್ನು ನೀಡಿದರು. ಗ್ರಾಮದಲ್ಲಿ ಸ್ವಚ್ಛತಾ ಕಾರ್ಯಗಳನ್ನು ನಿಯಮಿತವಾಗಿ ಕೈಗೊಳ್ಳುವುದು, ಸಾರ್ವಜನಿಕರಿಂದಲೂ ಸ್ವಚ್ಛತೆಗೆ ಸಹಕಾರ ಪಡೆಯುವುದು, ಕಸವನ್ನು ಎಲ್ಲೆಂದರಲ್ಲಿ ಎಸೆಯದಂತೆ ಜಾಗೃತಿ ಮೂಡಿಸುವುದು ಹಾಗೂ ಮಳೆಗಾಲದಲ್ಲಿ ವಿಶೇಷ ಸ್ವಚ್ಛತಾ ಅಭಿಯಾನಗಳನ್ನು ಹಮ್ಮಿಕೊಳ್ಳುವಂತೆ ತಿಳಿಸಿದರು. ಸಭೆಯಲ್ಲಿ ಗ್ರಾಮ ಪಂಚಾ ಯತಿ ಸಿಬ್ಬಂದಿಗಳು, ಸ್ವಚ್ಛತಾಗಾರರು ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001